ಸಂಪಾದಕರು : ಎ.ಕೆ ಮಲ್ಲಿಕಾರ್ಜುನ ▪ ಸಂಪುಟ : 01 ▪ ಸಂಚಿಕೆ : 26 ▪ ಪುಟ : 04 ▪ ಬೆಲೆ : 02 ▪ 01-07-2026 ▪ ಬುಧವಾರ ▪ ಬಳ್ಳಾರಿ

# ಗಣಿನಾಡ ವಾಣಿ

GANINAADA VAANI

E-mail : ganinaadavaani@gmail.com RNI No: KNKAN/26/A0397

ಸುದ್ದಿ ಹಾಗೂ ಆಕರ್ಷಕ ವಿನ್ಯಾಸದ ಜಾಹೀರಾತುಗಳಿಗಾಗಿ ಸಂಪರ್ಕಿಸಿ
9743034347
9900966891

2 ರೈತಾಪಿ ವರ್ಗಕ್ಕೆ ಬಸವಣ್ಣನೇ ಆಧಾರ : ಮಹಾದೇವ ಶ್ರೀ

3 2028 ರೊಳಗೆ ಮಾದಕ ವ್ಯಸನ ಮುಕ್ತ ಕರ್ನಾಟಕ

4 ಎಸ್‌ಐಆರ್ ಪ್ರಕ್ರಿಯೆ ಕುರಿತು ಚುನಾವಣಾ ಆಯೋಗ ಸ್ಪಷ್ಟನೆ ನೀಡಲು ಆಗ್ರಹ

# ಅಲ್ಪಸಂಖ್ಯಾತ ಸಮುದಾಯಗಳ ಹಿತರಕ್ಷಣೆ ನಮ್ಮ ಆದ್ಯತೆ

## ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್




▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಅಲ್ಪಸಂಖ್ಯಾತರ ಹಕ್ಕುಗಳನ್ನು ಕಾಯ್ದಿರಿಸಲು ಮತ್ತು ಅವರ ಹಿತಾಸಕ್ತಿಗಳನ್ನು ಕಾಪಾಡಲು ಆಯೋಗವು ಬದ್ಧವಾಗಿದೆ. ಶಿಕ್ಷಣ, ಮಹಿಳಾ ಸಬಲೀಕರಣ, ಯುವ ಸಬಲೀಕರಣ ಮತ್ತು ಸಾಮಾಜಿಕ ಪಿಡುಗುಗಳ ನಿರ್ಮೂಲನೆಗಾಗಿ ಆಯೋಗದಲ್ಲಿ ವಿಶೇಷ ಉಪಸಮಿತಿಗಳನ್ನು ರಚಿಸಲಾಗಿದ್ದು, ಇವುಗಳು ರಾಜ್ಯಾದ್ಯಂತ ಅಧ್ಯಯನ ನಡೆಸಿ ಸರ್ಕಾರಕ್ಕೆ ಸೂಕ್ತ ಶಿಫಾರಸುಗಳನ್ನು ಸಲ್ಲಿಸಲಿವೆ ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ತ್ರಿಮಟ್ಟದ ಉಸ್ತುವಾರಿ ಸಮಿತಿಗಳು:**

ಸರ್ಕಾರವು ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಪ್ರಮುಖವಾಗಿ ಮೂರು ಹಂತದ ಸಮಿತಿಗಳನ್ನು ರಚಿಸಿದೆ. ರಾಜ್ಯ ಮಟ್ಟದ 15 ಅಂಶಗಳ ಕಾರ್ಯಕ್ರಮ ಸಮಿತಿ, ಜಿಲ್ಲಾ ಮಟ್ಟದ ಸಮಿತಿ, ಬೆನಿಫಿಷಿಯರಿ ಸ್ಕೀಮ್ಸ್ ಉಸ್ತುವಾರಿ ಸಮಿತಿ ಒಳಗೊಂಡಿದೆ. ಸರ್ಕಾರದ ವಿವಿಧ ಇಲಾಖೆಗಳಲ್ಲಿರುವ ವೈಯಕ್ತಿಕ ಫಲಾನುಭವಿ ಆಧಾರಿತ ಯೋಜನೆಗಳಲ್ಲಿ ಅಲ್ಪಸಂಖ್ಯಾತರಿಗೆ ಕಡ್ಡಾಯವಾಗಿ ಶೇಕಡಾ 15 ರಷ್ಟು ಮೀಸಲಾತಿ ನೀಡಬೇಕು ಎಂಬ ನಿಯಮವಿದೆ. ಇದರ ಮೇಲ್ವಿಚಾರಣೆಗೆ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ. ಸರ್ಕಾರದ ವಿವಿಧ ಇಲಾಖೆಗಳ ಆಯುಕ್ತರು, ನಿರ್ದೇಶಕರು ಹಾಗೂ ಜಂಟಿ ಕಾರ್ಯದರ್ಶಿಗಳು ಇದರ ಸದಸ್ಯರಾಗಿದ್ದಾರೆ ಎಂದು ವಿವರಿಸಿದರು.

ಅಲ್ಪಸಂಖ್ಯಾತ ಸಮುದಾಯದ ಜನರಿಗೆ ಯಾವುದೇ ಇಲಾಖೆ ಅಥವಾ ಅಧಿಕಾರಿಗಳಿಂದ ಅನ್ಯಾಯವಾಗುತ್ತಿದ್ದರೆ, ಅಥವಾ ನ್ಯಾಯಸಮ್ಮತವಾದ ಕೆಲಸಗಳು ಆಗದಿದ್ದರೆ ನೇರವಾಗಿ ಆಯೋಗಕ್ಕೆ ದೂರು ನೀಡಬಹುದು. ಆಯೋಗವು ಸಿವಿಲ್ ನ್ಯಾಯಾಲಯದ ಅಧಿಕಾರವನ್ನು ಹೊಂದಿದೆ. ಸ್ವೀಕೃತವಾದ ದೂರುಗಳ ಆಧಾರದ ಮೇಲೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸಮನ್ಸ್ ಜಾರಿ ಮಾಡುವ ಅಧಿಕಾರ ಆಯೋಗಕ್ಕಿದೆ. ಪ್ರತಿ ತಿಂಗಳು ಆಯೋಗದ ಕಚೇರಿಯಲ್ಲಿ ಇಂತಹ ಪ್ರಕರಣಗಳ ವಿಚಾರಣೆ ನಡೆಸಿ ಇತ್ಯರ್ಥಪಡಿಸಲಾಗುತ್ತಿದೆ ಎಂದರು.

**ಬಳ್ಳಾರಿ ಜಿಲ್ಲೆಯಲ್ಲಿ ಜಾಗೃತಿಯ ಕೊರತೆ:**

ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ಒಂದೂವರೆ ವರ್ಷದಿಂದ ಆಯೋಗಕ್ಕೆ ಯಾವುದೇ ದೂರುಗಳು ಸಲ್ಲಿಕೆಯಾಗಿಲ್ಲದಿರುವ ಬಗ್ಗೆ ಅಧ್ಯಕ್ಷರು ಅಚ್ಚರಿ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿ ಯಾವುದೇ ಸಮಸ್ಯೆಗಳಿಲ್ಲ ಎಂದಲ್ಲ, ಬದಲಿಗೆ ಆಯೋಗದ ಅಧಿಕಾರ ಮತ್ತು ಕಾರ್ಯವೈಖರಿಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿಯ ಕೊರತೆಯಿರುವುದೇ ಇದಕ್ಕೆ ಕಾರಣ ಇರಬಹುದು ಎಂದು ಅವರು ಅಭಿಪ್ರಾಯಪಟ್ಟರು.

### ಅಲ್ಪಸಂಖ್ಯಾತ ಕೊಳಗೇರಿಗಳ ಮ್ಯಾಪಿಂಗ್‌ಗೆ ಸೂಚನೆ

ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗದವರು ವಾಸಿಸುವ ಕೊಳಗೇರಿ (ಸ್ಲಂ) ಪ್ರದೇಶಗಳಲ್ಲಿ ಮೂಲಭೂತ ಆರೋಗ್ಯ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಅಲ್ಪಸಂಖ್ಯಾತ ಕೊಳಗೇರಿಗಳನ್ನು ಗುರುತಿಸಿ, ಅಲ್ಲಿನ ಜನಸಂಖ್ಯೆಗೆ ಅನುಗುಣವಾಗಿ ನಮ್ಮ ಕ್ಲಿನಿಕ್, ಪ್ರಾಥಮಿಕ ಆರೋಗ್ಯ ಕೇಂದ್ರ ಅಥವಾ ಹೆರಿಗೆ ಆಸ್ಪತ್ರೆಗಳನ್ನು ಸ್ಥಾಪಿಸಲು ವರದಿ ಸಿದ್ಧಪಡಿಸುವಂತೆ ಆರೋಗ್ಯ ಮತ್ತು ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪ್ರವಾಸದ ಸಂದರ್ಭದಲ್ಲಿ ಅಧಿಕಾರಿಗಳು ಶಿಕ್ಷಣ, ವಸತಿ, ಆರೋಗ್ಯ ಸೇರಿದಂತೆ ಎಲ್ಲಾ ರಂಗಗಳಲ್ಲಿ ಅಲ್ಪಸಂಖ್ಯಾತರಿಗೆ ಸಿಗಬೇಕಾದ ಸೌಲಭ್ಯಗಳ ಪ್ರಗತಿಯನ್ನು ಪರಿಶೀಲಿಸಿ, ನ್ಯೂನತೆಗಳಿದ್ದರೆ ನೇರವಾಗಿ ಮುಖ್ಯಮಂತ್ರಿ ಹಾಗೂ ಮುಖ್ಯ ಕಾರ್ಯದರ್ಶಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ಎಚ್ಚರಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಸಮುದಾಯದ ಜನಸಂಖ್ಯೆ ಹೆಚ್ಚಿರುವ ಪ್ರದೇಶಗಳ ಮ್ಯಾಪಿಂಗ್ ಮತ್ತು ಜನಗಣತಿ ಸಮೀಕ್ಷೆ ನಡೆಸಬೇಕು.

ಯಾವುದೇ ಒಂದು ಕುಟುಂಬವೂ ಈ ಸಮೀಕ್ಷೆಯಿಂದ ಹೊರಗುಳಿಯದಂತೆ ಕ್ರಮ ವಹಿಸಬೇಕು. ಮುಂದಿನ ದಿನಗಳಲ್ಲಿ ಶಿಕ್ಷಣ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ, ಜಿಲ್ಲೆಯಲ್ಲಿರುವ 3 ರಿಂದ 6 ವರ್ಷದೊಳಗಿನ ಮಕ್ಕಳ ನಿಖರ ಮಾಹಿತಿ ಹಾಗೂ ಕಳೆದ ವರ್ಷ 6 ವರ್ಷ ಪೂರೈಸಿರುವ ಮಕ್ಕಳ ವಿವರಗಳನ್ನು ಪಡೆದುಕೊಳ್ಳಬೇಕು.

ಶಾಲೆ ಮತ್ತು ಅಂಗನವಾಡಿಗಳಿಂದ ಹೊರಗುಳಿದಿರುವ ಮಕ್ಕಳನ್ನು ಪತ್ತೆ ಹಚ್ಚಿ, ಅವರನ್ನು ಮರಳಿ ಶಿಕ್ಷಣದ ಮುಖ್ಯವಾಹಿನಿಗೆ ತರಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದರು.



ದೇಶದಲ್ಲಿ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸೇರಿದಂತೆ ಒಟ್ಟು ಆರು ಸಮುದಾಯಗಳನ್ನು ಅಲ್ಪಸಂಖ್ಯಾತರೆಂದು ಗುರುತಿಸಲಾಗಿದೆ. ಕರ್ನಾಟಕದಲ್ಲಿ ಇವರ ಪೈಕಿ ಮುಸ್ಲಿಂ ಸಮುದಾಯದ ಜನಸಂಖ್ಯೆ ಶೇಕಡಾ 82.25 ರಷ್ಟಿದ್ದು, ಬಹುಸಂಖ್ಯಾತರಾಗಿದ್ದಾರೆ. ಉಳಿದಂತೆ ಜೈನ್ ಮತ್ತು ಕ್ರಿಶ್ಚಿಯನ್ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಸಿಖ್ ಮತ್ತು ಪಾರ್ಸಿ ಸಮುದಾಯದವರು ಅತ್ಯಂತ ವಿರಳವಾಗಿದ್ದಾರೆ.

ಯು. ನಿಸಾರ್ ಅಹಮದ್ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರು

ಮುಸ್ಲಿಂ ಮತ್ತು ಇತರೆ ಮೈನಾರಿಟಿ ಸಮುದಾಯಗಳಲ್ಲಿ ಅನಕ್ಷರತೆಯ ಪ್ರಮಾಣವು ಹೆಚ್ಚಾಗುತ್ತಿದ್ದು, ಇದು ಸಮಾಜ ಮತ್ತು ದೇಶದ ಪ್ರಗತಿಗೆ ದೊಡ್ಡ ಹಿನ್ನಡೆಯಾಗಿದೆ. 2011ರ ಜನಗಣತಿಯ ಪ್ರಕಾರ, ಮೈನಾರಿಟಿಗಳಲ್ಲಿ, ಅದರಲ್ಲೂ ಮುಖ್ಯವಾಗಿ ಮುಸ್ಲಿಂ ಸಮುದಾಯದಲ್ಲಿ ಶೇಕಡಾ 43.76 ರಷ್ಟು ಜನರು ಅನಕ್ಷರಸ್ಥರಾಗಿದ್ದಾರೆ.

ಸಹಿ ಮಾಡಲೂ ಬಾರದ ಇಂತಹ ವ್ಯಕ್ತಿಗಳಿಂದ ಸಮಾಜಕ್ಕೆ ಅಥವಾ ದೇಶಕ್ಕೆ ಯಾವುದೇ ಕೊಡುಗೆ ನೀಡಲು ಸಾಧ್ಯವಾಗುತ್ತಿಲ್ಲ. 'ಶಿಕ್ಷಣ ಹಕ್ಕು ಕಾಯ್ದೆ'ಯ ಪ್ರಕಾರ 6 ರಿಂದ 14 ವರ್ಷದ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಗುಣಮಟ್ಟದ ಶಿಕ್ಷಣ ನೀಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸದಿದ್ದರೆ ಅಥವಾ ಬಾಲಕಾರ್ಮಿಕ ಪದ್ಧತಿಗೆ ತಳ್ಳಿದರೆ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ ಜೈಲಿಗೆ ಕಳುಹಿಸುವ ಕಾನೂನಿದೆ.

ಹಾಗಾಗಿ ಅಧಿಕಾರಿಗಳು ಈ ಕುರಿತು ಅವರಲ್ಲಿ ಅರಿವು ಮೂಡಿಸಬೇಕು ಎಂದರು.

ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಬ್ಯಾಂಕ್ ಲೋನ್ ಗಳನ್ನು ನೀಡಬೇಕು. ಬೀದಿ ಬದಿ ವ್ಯಾಪಾರಸ್ಥರಿಗೆ ನೆರವು ನೀಡಬೇಕು. ಉದ್ಯೋಗಾಧಾರಿತ ಕೌಶಲ್ಯ ತರಬೇತಿ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ್, ಆಯೋಗದ ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಮುಜಿಬುಲ್ಲಾ ಜಫಾರಿ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿ ರಾಜು ಸೇರಿದಂತೆ ಜಿಲ್ಲಾ ಮಟ್ಟದ ಸಮಿತಿಯ ಸದಸ್ಯರು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಅಧ್ಯಕ್ಷರು, ಜಿಲ್ಲಾ ಪಂಚಾಯತ್ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಅಲ್ಪಸಂಖ್ಯಾತರ ಕುಂದು ಕೊರತೆಗಳ ವಿಚಾರಣಾ ಸಭೆ ನಡೆಸಿದರು.

# ಬಳ್ಳಾರಿಯಲ್ಲಿ ನೂತನ 'ನಂದಿನಿ ಏಕವಿನ್ಯಾಸ ಪಾರ್ಲರ್' ಉದ್ಘಾಟನೆ

## 160ಕ್ಕೂ ಹೆಚ್ಚು ಉತ್ಪನ್ನಗಳು ಗ್ರಾಹಕರಿಗೆ ಲಭ್ಯ



▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ವತಿಯಿಂದ ಬಳ್ಳಾರಿ ನಗರದ ಕೋಟೆ ಪ್ರದೇಶದಲ್ಲಿರುವ ಸೇಂಟ್ ಜಾನ್ಸ್ ಶಾಲೆಯ ಮುಂಭಾಗದಲ್ಲಿ ನೂತನ 'ನಂದಿನಿ ಏಕವಿನ್ಯಾಸ ಪಾರ್ಲರ್' ಮಂಗಳವಾರ ಉದ್ಘಾಟಿಸಲಾಯಿತು.

ಒಕ್ಕೂಟದ ಆಡಳಿತ ಮಂಡಳಿ ನಿರ್ದೇಶಕರುಗಳಾದ ಅಮರಗುಂಡಪ್ಪ, ಐಗೋಳ ಚಿದಾನಂದ ಹಾಗೂ ನಾಗೇಶ್ವರರಾವ್ ಅವರು ಜಂಟಿಯಾಗಿ ನೂತನ ಪಾರ್ಲರ್ ಅನ್ನು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅತಿಥಿಗಳು, ನಂದಿನಿ ಬ್ರ್ಯಾಂಡ್ ಅಡಿಯಲ್ಲಿ ಸದ್ಯ ಸುಮಾರು 160ಕ್ಕೂ ಅಧಿಕ ವೈವಿಧ್ಯಮಯ ಹಾಲಿನ ಉತ್ಪನ್ನಗಳು ಲಭ್ಯವಿದ್ದು, ಸಾರ್ವಜನಿಕರು ಹಾಗೂ ಗ್ರಾಹಕರು ಇದರ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಪ್ರಭಾರ ವ್ಯವಸ್ಥಾಪಕ (ಮಾರುಕಟ್ಟೆ) ಎಸ್. ವೆಂಕಟೇಶ ಗೌಡ ಅವರು ಮಾತನಾಡಿ, ಹಾಲು ಮತ್ತು ಹಾಲಿನ ಉತ್ಪನ್ನಗಳ ಬಳಕೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದ ಅವರು, ಹಾಲಿನಲ್ಲಿರುವ ಕ್ಯಾಲ್ಸಿಯಂ, ಪ್ರೋಟೀನ್ ಹಾಗೂ ವಿಟಮಿನ್-ಬಿ2 ನಂತಹ ಪ್ರಮುಖ ಪೋಷಕಾಂಶಗಳು ಆರೋಗ್ಯ ರಕ್ಷಣೆಗೆ ಹೇಗೆ ಸಹಕಾರಿ ಎಂಬುದನ್ನು ವಿವರಿಸಿದರು. ಮಾನವನ ದೈನಂದಿನ ಜೀವನದಲ್ಲಿ ಹಾಲಿನ ಅಗತ್ಯತೆ ಮತ್ತು ಪ್ರಾಮುಖ್ಯತೆಯ ಬಗ್ಗೆ ಸವಿವರವಾಗಿ ಮಾಹಿತಿ ನೀಡಿದರು.

ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಹಾಲು ಒಕ್ಕೂಟವು ಲಕ್ಷಾಂತರ ಹೈನುಗಾರರು ಹಾಗೂ ಗ್ರಾಹಕರನ್ನು ಒಳಗೊಂಡ ಬೃಹತ್ ಸಹಕಾರಿ ಸಂಸ್ಥೆಯಾಗಿದೆ.

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ 'ಕ್ಷೀರಭಾಗ್ಯ' ಮತ್ತು 'ಕ್ಷೀರಧಾರೆ'ಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಾ ಬಂದಿರುವ ಒಕ್ಕೂಟವು, ಪ್ರತಿದಿನ ಸರಾಸರಿ 2.0 ಲಕ್ಷ ಲೀಟರ್ ಗುಣಮಟ್ಟದ ಹಾಲನ್ನು ಶೇಖರಿಸುತ್ತಿದೆ. ಇದನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ, ಪರಿಶುದ್ಧ ಹಾಗೂ ಕಲಬೆರಕೆ ರಹಿತ ನಂದಿನಿ ಹಾಲು ಮತ್ತು ಉತ್ಪನ್ನಗಳನ್ನು ಗ್ರಾಹಕರಿಗೆ ಸುರಕ್ಷಿತವಾಗಿ ತಲುಪಿಸಲಾಗುತ್ತಿದೆ ಎಂದು ಒಕ್ಕೂಟವು ತಿಳಿಸಿದೆ.

ಈ ಸಂದರ್ಭದಲ್ಲಿ ಒಕ್ಕೂಟದ ಮಾರುಕಟ್ಟೆ ಸಹಾಯಕರು (ದರ್ಜೆ-2) ಗಳಾದ ಲೋಹಿತಕುಮಾರ ಹಾಗೂ ಪ್ರಸನ್ನಕುಮಾರ, ಸಿಬ್ಬಂದಿಗಳಾದ ಸಿ.ಎನ್. ಮಂಜುನಾಥ, ಬಾಬು ಮತ್ತು ಪಾರ್ಲರ್ ಡೀಲರ್ ಆದ ಸಿದ್ದಾರ್ಥ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಶಾಲೆ ಭೇಟಿ : ಸಮಸ್ಯೆಗಳ ಪರಿಶೀಲನೆ



▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು. ನಿಸಾರ್ ಅಹಮದ್ ಅವರು ಮಂಗಳವಾರ ನಗರದ ಎಪಿಎಂಸಿ ಈದ್ಗಾ ಸಮೀಪದ ಸರ್ಕಾರಿ ಹಿರಿಯ ಉರ್ದು ಪ್ರೌಢಶಾಲೆ ಹಾಗೂ ಕೌಲ್ ಬಜಾರ್ ತರಬೇತಿ ಶಾಲೆಗೆ ಭೇಟಿ ನೀಡಿ ಶಾಲಾ ಕಟ್ಟಡ ಹಾಗೂ ಮೂಲಸೌಕರ್ಯಗಳನ್ನು ಪರಿಶೀಲಿಸಿದರು.

ಭೇಟಿ ವೇಳೆ ಶಾಲೆಯ ಶಿಕ್ಷಕರು ಮತ್ತು ಸಿಬ್ಬಂದಿಯಿಂದ ಶಾಲೆಯಲ್ಲಿರುವ ವಿವಿಧ ಸಮಸ್ಯೆಗಳು, ಮೂಲಸೌಕರ್ಯದ ಕೊರತೆ ಹಾಗೂ ಅಗತ್ಯ ಸೌಲಭ್ಯಗಳ ಕುರಿತು ಮಾಹಿತಿ ಪಡೆದು ಆಲಿಸಿದರು.

ಶಾಲೆಯ ತರಗತಿ ಕೊಠಡಿಗಳು, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯಗಳು ಮತ್ತು ಗ್ರಂಥಾಲಯವನ್ನು ಖುದ್ದಾಗಿ ವೀಕ್ಷಿಸಿದ ಅಧ್ಯಕ್ಷರು, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು ಎಂದು ಶಿಕ್ಷಕರಿಗೆ ಸೂಚಿಸಿದರು.

ಕಟ್ಟಡದ ಸ್ಥಿತಿಗತಿ, ತರಗತಿ ಕೊಠಡಿಗಳು ಹಾಗೂ ಶಾಲಾ ಪರಿಸರವನ್ನು ಪರಿಶೀಲಿಸಿದ ಅವರು, ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಅಲ್ಪಸಂಖ್ಯಾತ ಸಮುದಾಯದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಬೇಕು ಎನ್ನುವುದು ಸರ್ಕಾರದ ಆಶಯವಾಗಿದೆ. ಶಾಲೆಯಲ್ಲಿ ಕಂಡುಬಂದಿರುವ ಕೊಠಡಿಗಳ ಕೊರತೆ ಮತ್ತು ಸ್ವಚ್ಛತೆಯ ಸಮಸ್ಯೆಗಳನ್ನು ಶೀಘ್ರದಲ್ಲೇ ಬಗೆಹರಿಸಲಾಗುವುದು. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಶಿಕ್ಷಣ ಇಲಾಖೆಗೆ ಶೀಘ್ರದಲ್ಲೇ ವರದಿ ಸಲ್ಲಿಸಿ, ಅಗತ್ಯ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಸಮುದಾಯದ ರಾಜ್ಯಾಧ್ಯಕ್ಷ ದಾದಾ ಭಾಯ್, ಜಿಲ್ಲಾಧ್ಯಕ್ಷ ಡಿ.ಅಯಾಜ್, ಬುಡಾ ಮಾಜಿ ಅಧ್ಯಕ್ಷ ಮೋಹಿನ್ ಖಾನ್, ಕ್ರಿಶ್ಚಿಯನ್ ಸಮುದಾಯದ ಮುಖ್ಯಸ್ಥ ಜಾಶ್ವಾ, ಮುಖಂಡ ಕಣೇಕಲ್ ಮಾಬುಸಾಬ್, ಆಯೋಗದ ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಮುಜಿಬುಲ್ಲಾ ಜಫಾರಿ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿ ರಾಜು ಸೇರಿದಂತೆ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ದಲಿತರ ಹಕ್ಕುಗಳ ಈಡೇರಿಕೆಗೆ ಜು. 3ರಿಂದ ಅನಿರ್ದಿಷ್ಟ ಹೋರಾಟ : ಹುಸೇನಪ್ಪ




▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಭೂಮಿ, ವಸತಿ, ಸರ್ಕಾರಿ ಉದ್ಯೋಗಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ, ವಿಶೇಷ ಘಟಕ ಯೋಜನೆ (ಎಸ್‌ಸಿಎಸ್‌ಪಿ/ಟಿಎಸ್‌ಪಿ) ಸಮರ್ಪಕ ಅನುಷ್ಠಾನ ಹಾಗೂ ಏಕಗವಾಕ್ಷಿ ನೀತಿ ಜಾರಿಗೆ ಆಗ್ರಹಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಜುಲೈ 3ರಿಂದ ರಾಜ್ಯಾದ್ಯಂತ ಅನಿರ್ದಿಷ್ಟ ಹಕ್ಕೊತ್ತಾಯ ದಲಿತ ಜನಾಗ್ರಹ ಸಮಾವೇಶ ಮತ್ತು ಹೋರಾಟ ಆರಂಭಿಸಲಾಗುವುದು ಎಂದು ಸಮಿತಿಯ ರಾಜ್ಯ ಸಂಘಟನಾ ಸಂಚಾಲಕ ಹುಸೇನಪ್ಪ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರ ಹೋರಾಟದ ಫಲವಾಗಿ ಶೋಷಿತ ಸಮುದಾಯಗಳಿಗೆ ಸಂವಿಧಾನಬದ್ಧ ಹಕ್ಕುಗಳು ದೊರೆತಿವೆ.

ಆ ತತ್ವ-ಸಿದ್ಧಾಂತಗಳನ್ನು ಮುಂದುವರಿಸಿಕೊಂಡು 1970ರ ದಶಕದಲ್ಲಿ ಪ್ರೊ. ಬಿ. ಕೃಷ್ಣಪ್ಪ ಅವರ ನೇತೃತ್ವದಲ್ಲಿ ಸ್ಥಾಪನೆಯಾದ ಕರ್ನಾಟಕ ದಲಿತ ಸಂಘರ್ಷ ಸಮಿತಿ, ದಲಿತರ ಸ್ವಾಭಿಮಾನ, ಸ್ವಾವಲಂಬನೆ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ನಿರಂತರ ಹೋರಾಟ ನಡೆಸುತ್ತಿದೆ ಎಂದು ಹೇಳಿದರು.

ಭದ್ರಾವತಿಯ ಸಿದ್ದಿಪುರ ಭೂ ಹೋರಾಟವು ರಾಜ್ಯದ ಭೂವಂಚಿತ ದಲಿತ ಸಮುದಾಯಗಳಲ್ಲಿ ಭೂ ಹಕ್ಕಿನ ಕುರಿತು ಜಾಗೃತಿ ಮೂಡಿಸಿತು. ಅದರ ಪರಿಣಾಮವಾಗಿ 1978ರಲ್ಲಿ ಪಿ.ಟಿ.ಸಿ.ಎಲ್. ಕಾಯ್ದೆ ಜಾರಿಗೆ ಬರಲು ಸಾಧ್ಯವಾಯಿತು ಎಂದು ಅವರು ತಿಳಿಸಿದರು.

ಸರ್ಕಾರ ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯಡಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗೆ ಅನುದಾನ ಮೀಸಲಿಟ್ಟಿದ್ದರೂ ಅದರ ಸಮರ್ಪಕ ಬಳಕೆ ಆಗುತ್ತಿಲ್ಲ. ವಿಶೇಷ ಘಟಕ ಯೋಜನೆಯ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸುತ್ತಿರುವುದು ಕಾಯ್ದೆಯ ಉಲ್ಲಂಘನೆಯಾಗಿದೆ ಎಂದು ಆರೋಪಿಸಿದ ಅವರು, ಭೂಮಿ, ವಸತಿ, ಶಿಕ್ಷಣ ಹಾಗೂ ಸರ್ಕಾರಿ ಉದ್ಯೋಗಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಸೇರಿದಂತೆ ಹಲವು ಮೂಲಭೂತ ಬೇಡಿಕೆಗಳು ಇನ್ನೂ ಈಡೇರಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಭೂರಹಿತ ಪರಿಶಿಷ್ಟ ಕುಟುಂಬಗಳಿಗೆ ಕನಿಷ್ಠ ಎರಡು ಎಕರೆ ಭೂಮಿ ಮಂಜೂರು ಮಾಡಬೇಕು. ವಸತಿಹೀನರಿಗೆ ಮನೆ ನಿರ್ಮಿಸಿ ನೀಡಬೇಕು. ಸರ್ಕಾರಿ ಇಲಾಖೆಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಬೇಕು.

ವಿಶೇಷ ಘಟಕ ಯೋಜನೆ ಅನುಷ್ಠಾನಕ್ಕೆ ಏಕಗವಾಕ್ಷಿ ನೀತಿ ಜಾರಿಗೊಳಿಸಬೇಕು. ಸಮಾಜ ಕಲ್ಯಾಣ ಇಲಾಖೆಯ ಅಭಿವೃದ್ಧಿ ನಿಗಮಗಳಿಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಬೇಕು.

ದಲಿತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸಿ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಸುಸಜ್ಜಿತ ವಿದ್ಯಾರ್ಥಿ ವಸತಿ ಸಮುಚ್ಚಯಗಳನ್ನು ನಿರ್ಮಿಸಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ಪಿ.ಟಿ.ಸಿ.ಎಲ್. ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ ಪರಿಶಿಷ್ಟರ ಭೂ ಹಕ್ಕುಗಳನ್ನು ರಕ್ಷಿಸಬೇಕು.

ರಾಜ್ಯದಲ್ಲಿ ವಸತಿಹೀನರ ಸಮಗ್ರ ಸಮೀಕ್ಷೆ ನಡೆಸಬೇಕು. ಆರ್ಥಿಕ ಮತ್ತು ಸಾಮಾಜಿಕ ಜಾತಿ ಜನಗಣತಿ ವರದಿಯನ್ನು ಸಾರ್ವಜನಿಕ ಚರ್ಚೆಗೆ ಬಿಡುಗಡೆ ಮಾಡಬೇಕು. ಪರಿಶಿಷ್ಟರ ಮೇಲಿನ ದೌರ್ಜನ್ಯ ಪ್ರಕರಣಗಳ ತನಿಖೆಗಾಗಿ ಡಿ.ಸಿ.ಆರ್.ಇ. ಪೊಲೀಸ್ ಠಾಣೆಗಳಿಗೆ ಅಗತ್ಯ ಸಿಬ್ಬಂದಿ ಮತ್ತು ಮೂಲಸೌಕರ್ಯ ಒದಗಿಸಬೇಕು ಎಂದು ಒತ್ತಾಯಿಸಿದರು. ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಆರ್ಥಿಕವಾಗಿ ದುರ್ಬಲ ವರ್ಗಗಳ (EWS) ಮೀಸಲಾತಿಯನ್ನು ರದ್ದುಗೊಳಿಸಿ, ಪರಿಶಿಷ್ಟ ಜಾತಿ ಹಾಗೂ ಹಿಂದುಳಿದ ವರ್ಗಗಳ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಮತ್ತು ಅನುದಾನ ಹೆಚ್ಚಳ ಮಾಡಬೇಕು. ವಿಶೇಷ ಘಟಕ ಯೋಜನೆಗೆ ಕೇಂದ್ರ ಮಟ್ಟದಲ್ಲೂ ಪ್ರತ್ಯೇಕ ಕಾಯ್ದೆ ರೂಪಿಸಬೇಕು ಎಂದು ಒತ್ತಾಯಿಸಿದರು.

ಪುಟ-3

# ರೈತಾಪಿ ವರ್ಗಕ್ಕೆ ಬಸವಣ್ಣನೇ ಆಧಾರ : ಮಹಾದೇವ ಶ್ರೀ

▪ **ಗಣಿನಾಡವಾಣಿ ವಾರ್ತೆ, ಕುಕನೂರು**

ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ತಳಕಲ್ ಗ್ರಾಮದಲ್ಲಿ ಕಾರಹುಣ್ಣಿಮೆ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಎಂ.ಎಸ್. ಚಾರಿಟೇಬಲ್ ಟ್ರಸ್ಟ್, ಕುಕನೂರು ವತಿಯಿಂದ ಅನ್ನದಾನೀಶ್ವರ ಶಾಖಾಮಠದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಬಸವಣ್ಣನಿಗೆ ವಿಶೇಷ ಪೂಜೆ ಸಲ್ಲಿಸಿ ರೈತ ಸಮುದಾಯದ ಕ್ಷೇಮಕ್ಕಾಗಿ ಪ್ರಾರ್ಥಿಸಲಾಯಿತು.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ತಳಕಲ್ ಶ್ರೀಮಠದ ಪೂಜ್ಯ ಮಹಾದೇವ ಸ್ವಾಮೀಜಿ, "ಕಾರಹುಣ್ಣಿಮೆ ನಮ್ಮ ನಾಡಿನ ಕೃಷಿ ಸಂಸ್ಕೃತಿಯ ಪ್ರತೀಕವಾಗಿದೆ. ರೈತನ ಜೀವನಾಡಿಯಾದ ಎತ್ತುಗಳನ್ನು ಪೂಜಿಸುವ ಮೂಲಕ ಅವುಗಳ ಸೇವೆಗೆ ಕೃತಜ್ಞತೆ ಸಲ್ಲಿಸುವುದು ನಮ್ಮ ಪರಂಪರೆ. ಬಸವಣ್ಣನ ಸೇವೆ ಲೋಕಕಲ್ಯಾಣಕ್ಕಾಗಿ ಎಂಬ ಸಂದೇಶವನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು" ಎಂದು ಹೇಳಿದರು.

"ರೈತ ದೇಶದ ಬೆನ್ನೆಲುಬು ಎಂದರೆ, ಆ ರೈತನ ಬೆನ್ನೆಲುಬೇ ಬಸವಣ್ಣ. ಹೊಲದಲ್ಲಿ ರೈತನೊಂದಿಗೆ ಬೆವರು ಸುರಿಸುವ, ನೇಗಿಲು ಹೊರುವ ಎತ್ತು ದೇವರ ಸಮಾನ. ಕಾರಹುಣ್ಣಿಮೆ ಕೇವಲ ಹಬ್ಬವಲ್ಲ, ರೈತ ತನ್ನ ಜೀವನ ಸಂಗಾತಿಗೆ ಸಲ್ಲಿಸುವ ಕೃತಜ್ಞತೆಯ ಸಂಕೇತವಾಗಿದೆ" ಎಂದು ಅವರು ತಿಳಿಸಿದರು.



ರೈತ ಮುಖಂಡ ಪಕ್ಕಪ್ಪ ಅಳವಂಡಿ ಮಾತನಾಡಿ, "ನಮ್ಮ ಹಿರಿಯರು ಉಳಿಸಿ ಬೆಳೆಸಿದ ಕೃಷಿ ಪದ್ಧತಿ ಹಾಗೂ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೂ ಕೊಂಡೊಯ್ಯುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಮಳೆ, ಬೆಳೆ, ಎತ್ತು ಹಾಗೂ ನೇಗಿಲು ನಮ್ಮ ಬದುಕಿನ ಅವಿಭಾಜ್ಯ ಅಂಗಗಳು. ರೈತರ ಪರವಾಗಿ ಮಠದ ಸ್ವಾಮೀಜಿಯವರು ನಿಂತಿರುವುದು ರೈತ ಸಮುದಾಯಕ್ಕೆ ಧೈರ್ಯ ತುಂಬಿದೆ" ಎಂದರು.

"ಇಂದಿನ ಯುವಕರು ಕೃಷಿಯಿಂದ ವಿಮುಖರಾಗುತ್ತಿರುವುದು ಆತಂಕಕಾರಿ ಬೆಳವಣಿಗೆ. ಮಣ್ಣಿನ ಋಣವನ್ನು ಎಂದಿಗೂ ಮರೆಯಬಾರದು. ಮಠದ ಆವರಣದಲ್ಲಿ ನಾವೆಲ್ಲರೂ ಒಟ್ಟಾಗಿ ಬಸವಣ್ಣನಿಗೆ ಪೂಜೆ ಸಲ್ಲಿಸಿದ್ದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಈ ಮಠ ರೈತರಿಗೆ ಮಾರ್ಗದರ್ಶನ ಕೇಂದ್ರವಾಗಿ ಬೆಳೆಯಲಿ" ಎಂದು ಆಶಿಸಿದರು.

ಬಸವರಾಜ ಬ್ಯಾಳಿ ಮಾತನಾಡಿ, "ಒಂದು ಕಾಲದಲ್ಲಿ ಪ್ರತಿಯೊಂದು ಮನೆಯಲ್ಲೂ ಎತ್ತುಗಳಿದ್ದವು. ಈಗ ಯಾಂತ್ರೀಕರಣ ಹೆಚ್ಚಾಗಿದ್ದರೂ ಬಸವಣ್ಣನ ಮೇಲಿನ ಭಕ್ತಿ ಮಾತ್ರ ಕಡಿಮೆಯಾಗಿಲ್ಲ. ತಳಕಲ್ ಗ್ರಾಮದ ರೈತರ ಒಗ್ಗಟ್ಟಿಗೆ ಈ ಕಾರ್ಯಕ್ರಮವೇ ಸಾಕ್ಷಿಯಾಗಿದೆ. ಮಳೆಯಾಶ್ರಿತ ಕೃಷಿ ಮಾಡುವ ರೈತರಿಗೆ ಇಂತಹ ಆಚರಣೆಗಳು ಆತ್ಮಸ್ಥೈರ್ಯ ತುಂಬುತ್ತವೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕುಕನೂರಿನ ಸಂಗಮೇಶ ಕಲ್ಮಠ, ನಾಗರಾಜ ಚರಂತಿಮಠ, ಮಲ್ಲಯ್ಯ ಲಕಮಾಪೂರಮಠ, ಪಕ್ಕಪ್ಪ ಮುರಿಗಿ, ಮುದಿಯಪ್ಪ ಯೋಗೆಮ್ಮನವರ, ಪ್ರವೀಣ ಕರ್ಜಗಿ, ಶಿವಪ್ಪ ಬ್ಯಾಳಿ, ಸುನಿಲ್ ಗೋರಿ, ಗವಿಸಿದ್ದಪ್ಪ ದೊಡ್ಡಮನಿ, ಬಾವರಾಜ ಚಿಲವಾಡಿಗಿ, ರವಿ ತಳವಾರ, ಶರಣಪ್ಪ ಬ್ಯಾಳಿ, ವಿರೂಪಾಕ್ಷಿ ನಿಟ್ಟಾಲಿ, ರುದ್ರಪ್ಪ ಚಿಲವಾಡಿಗಿ, ಮುತ್ತಪ್ಪ ಗೋರಿ, ಅಬ್ಬಾಸಾಲಿ, ಕಲ್ಲಯ್ಯ ಮುಂಡರಗಿ ಸೇರಿದಂತೆ ಗ್ರಾಮಸ್ಥರು ಹಾಗೂ ರೈತರು ಭಾಗವಹಿಸಿದ್ದರು.

# ಮಾದಕ ವ್ಯಸನದಿಂದ ದೂರವಿದ್ದು ಆರೋಗ್ಯವಂತ ಸಮಾಜ ನಿರ್ಮಿಸಿ : ಎಎಸ್ಐ ರಮೇಶ್



▪ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ಮಾದಕ ವ್ಯಸನಿಗಳಾಗದೆ ಪ್ರತಿಯೊಬ್ಬರೂ ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಪಣ ತೊಡಬೇಕು ಎಂದು ತುರುವನೂರು ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ನಿರೀಕ್ಷಕರಾದ ರಮೇಶ್ ತಿಳಿಸಿದರು.

ಚಿತ್ರದುರ್ಗ ತಾಲ್ಲೂಕಿನ ತುರುವನೂರು ಹೋಬಳಿಯ ಕೂನಬೇವು ಸರ್ಕಾರಿ ಪ್ರೌಢಶಾಲೆಯಲ್ಲಿ ತುರುವನೂರು ಪೊಲೀಸ್ ಠಾಣೆಯ ವತಿಯಿಂದ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ 'ಅಂತರರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಸಾಗಾಣಿಕೆ ವಿರೋಧಿ ದಿನ–2026' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೆಲವು ವಸ್ತುಗಳನ್ನು ಪದೇ ಪದೇ ಬಳಸುವುದರಿಂದ ಮಾದಕತೆ ಉಂಟಾಗುತ್ತಾ ಹೋಗುತ್ತದೆ. ಅದನ್ನು ನಿರಂತರವಾಗಿ ಬಳಸುವುದರಿಂದ ಮೆದುಳು ನಿಷ್ಕ್ರಿಯವಾಗುತ್ತಾ ಸಾಗುತ್ತದೆ ಎಂದು ಅವರು ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಎಚ್ಚರಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲೆಯ ಮುಖ್ಯೋಪಾಧ್ಯಾಯರಾದ ಹನುಮಂತಪ್ಪ, ನಗರಗಳಲ್ಲಿ ಶ್ರೀಮಂತ ಮಕ್ಕಳು ಮಾದಕ ವಸ್ತುಗಳನ್ನು ಬಳಸಿ ತಮ್ಮ ಬದುಕನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ.

ಯುವಜನತೆ ದೇಶದ ಆಸ್ತಿಯಾಗಬೇಕೇ ಹೊರತು ದುಶ್ಚಟಗಳ ದಾಸರಾಗಬಾರದು. ಮಾದಕ ವಸ್ತುಗಳ ಮಾರಾಟ ಮತ್ತು ಸಾಗಣೆ ಮಾಡುವುದು ಕಾನೂನುಬಾಹಿರ ಹಾಗೂ ಅಪರಾಧವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಶಾಲೆಯ ಸಹ ಶಿಕ್ಷಕರಾದ ಕೃಷ್ಣ, ಮಾರುತಿಪ್ರಸಾದ್, ಷರೀಫ್, ಪ್ರಶಾಂತ್‌ಕುಮಾರಿ, ರಾಧಾಮಣಿ, ವೀಣಾ ಹಾಗೂ ದ್ವಿತೀಯ ದರ್ಜೆ ಸಹಾಯಕ ನೋಬೆಲ್ ಕುಮಾರ್, ತುರುವನೂರು ಪೊಲೀಸ್ ಠಾಣೆಯ ಸಿಬ್ಬಂದಿಯಾದ ಮೋಹನ್ ಕುಮಾರ್ ಮತ್ತು ನೂರ್ ಅಹಮದ್ ಇದ್ದರು.

# ಯುವಕರು ರಕ್ತದಾನದ ಮೂಲಕ ಸಮಾಜಕ್ಕೆ ಕೊಡುಗೆ ನೀಡಬೇಕು : ಡಾ. ಪಾಲಾಕ್ಷಯ್ಯ



▪ **ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ**

ರಕ್ತವನ್ನು ಯಾವುದೇ ಕಾರ್ಖಾನೆಯಲ್ಲಿ ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ. ಅದನ್ನು ಒಬ್ಬರಿಂದ ಮತ್ತೊಬ್ಬರಿಗೆ ದಾನ ಮಾಡಲು ಮಾತ್ರ ಸಾಧ್ಯ. ಯುವಜನತೆ ಹೆಚ್ಚೆಚ್ಚು ರಕ್ತದಾನ ಮಾಡುವ ಮೂಲಕ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಐಎಂಎ ಜಿಲ್ಲಾ ಅಧ್ಯಕ್ಷರಾದ ಡಾ.ಎಲ್.ಪಾಲಾಕ್ಷಯ್ಯ ಹೇಳಿದರು.

ನಗರದ ಐ.ಎಂ.ಎ ಸಭಾಂಗಣದಲ್ಲಿ ಮಂಗಳವಾರ ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ (ಐಎಂಎ) ಹಾಗೂ ಕೋಟೆನಾಡು ವೆಲ್ಫೇರ್ ಫೌಂಡೇಶನ್ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ರಕ್ತದಾನ ಶಿಬಿರ' ಉದ್ಘಾಟಿಸಿ ಅವರು ಮಾತನಾಡಿದರು.

ನಾವು ನೀಡುವ ಒಂದು ಯೂನಿಟ್ ರಕ್ತವು ಸಂಸ್ಕರಣೆಯ ಮೂಲಕ ಕನಿಷ್ಠ ಮೂರು ಜನರ ಪ್ರಾಣ ಉಳಿಸಬಲ್ಲದು.

ರಕ್ತದ ಮಹತ್ವ ಹಾಗೂ ದೇಶದಲ್ಲಿ ಎದುರಾಗುತ್ತಿರುವ ರಕ್ತದ ಕೊರತೆ ನಿವಾರಿಸುವಲ್ಲಿ ರೆಡ್‌ಕ್ರಾಸ್ ಸಂಸ್ಥೆಯು ನಿರಂತರವಾಗಿ ಮಾಡುತ್ತಿರುವ ಸೇವೆ ನಿಜಕ್ಕೂ ಶ್ಲಾಘನೀಯ ಎಂದು ಬಣ್ಣಿಸಿದರು.

"ರಕ್ತದಾನ ಮಾಡಿ – ಜೀವ ಉಳಿಸಿ", "ನನ್ನ ರಕ್ತ – ನನ್ನ ಕೊಡುಗೆ" ಎಂಬ ಘೋಷವಾಕ್ಯಗಳೊಂದಿಗೆ ರಕ್ತದಾನ ಜಾಗೃತಿ ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ಅತಿ ಹೆಚ್ಚು ಬಾರಿ ರಕ್ತದಾನ ಮಾಡಿ ಮಾದರಿಯಾಗಿರುವ ಪ್ರಮುಖ ರಕ್ತದಾನಿಗಳನ್ನು ಗುರುತಿಸಿ, ಅವರಿಗೆ ಪ್ರಮಾಣಪತ್ರ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು. ಶಿಬಿರದಲ್ಲಿನೂರಾರುಯುವಕರುಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಯುವಜನಾಧಿಕಾರಿ ಧನಂಜಯ್ ಜಗತಾಪ್, ರೆಡ್‌ಕ್ರಾಸ್ ಸಂಸ್ಥೆಯ ಸಭಾಪತಿ ಗಾಯತ್ರಿ ಶಿವರಾಮ್, ಉಪ ಸಭಾಪತಿ ಅರುಣ್ ಕುಮಾರ್, ಕಾರ್ಯದರ್ಶಿ ಮಜಹರ್ ಉಲ್ಲಾ, ಖಜಾಂಚಿ ವಿರೇಶ್, ನಿರ್ದೇಶಕರಾದ ಪಿ.ಬಿ. ಶಿವರಾಮ್, ಗುರುಮೂರ್ತಿ, ಸುರೇಶ್ ಬಾಬು, ಕೋಟೆನಾಡು ವೆಲ್ಫೇರ್ ಫೌಂಡೇಶನ್ ಅಧ್ಯಕ್ಷ ಮುಷ್ತಾಕ್ ಅಹ್ಮದ್ ಮತ್ತು ಪದಾಧಿಕಾರಿಗಳು, ಬಸವೇಶ್ವರ ರಕ್ತಕೇಂದ್ರದ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

## ರಣಜಿತ್‌ಪುರ ಇನ್‌ಫ್ರಾಸ್ಟ್ರಕ್ಚರ್ ವಿಸ್ತರಣೆ ಯೋಜನೆ : ಜುಲೈ 30 ರಂದು ಪರಿಸರ ಸಾರ್ವಜನಿಕ ಅಹವಾಲು ಸಭೆ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಜಿಲ್ಲೆಯ ಸಂಡೂರು ತಾಲೂಕಿನ ರಣಜಿತ್‌ಪುರ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆ॥ ರಣಜಿತ್‌ಪುರ ಇನ್‌ಫ್ರಾಸ್ಟ್ರಕ್ಚರ್ ಪ್ರೈವೇಟ್ ಲಿಮಿಟೆಡ್ ಕಂಪನಿಯು ತನ್ನ ಘಟಕದ ಬೃಹತ್ ವಿಸ್ತರಣಾ ಯೋಜನೆಗೆ ಮುಂದಾಗಿದ್ದು, ಈ ಯೋಜನೆಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಅಭಿಪ್ರಾಯ ಹಾಗೂ ಆಕ್ಷೇಪಣೆಗಳನ್ನು ಆಲಿಸಲು ಜುಲೈ 30 ರಂದು ಬೆಳಿಗ್ಗೆ 11 ಗಂಟೆಗೆ ಕಂಪನಿಯ ಯೋಜನಾ ಪ್ರದೇಶದಲ್ಲಿ ಪರಿಸರ ಸಾರ್ವಜನಿಕ ಅಹವಾಲು ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ಸಭೆ ಜರುಗಲಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿಗಳು ತಿಳಿಸಿದ್ದಾರೆ.

**ವಿಸ್ತರಣಾ ಯೋಜನೆಯ ಅಂಶಗಳು:**

**ಉತ್ಪಾದನಾ ಸಾಮರ್ಥ್ಯ ಹೆಚ್ಚಳ:** ಪ್ರಸ್ತುತ ಇರುವ ಸ್ಪಾಂಜ್ ಐರನ್ ಘಟಕ ಮತ್ತು ಬೆನಿಫಿಷಿಯೇಷನ್ ಘಟಕದ ಸಾಮರ್ಥ್ಯವನ್ನು ದಿನಕ್ಕೆ 190 ಟನ್‌ನಿಂದ 375 ಟಿಪಿಡಿ ಗೆ ವಿಸ್ತರಿಸಲು ಉದ್ದೇಶಿಸಲಾಗಿದೆ.

**ಬೆನಿಫಿಷಿಯೇಷನ್ ಘಟಕ:** ಇದರ ಸಾಮರ್ಥ್ಯವನ್ನು ವರ್ಷಕ್ಕೆ 0.48 ಮಿಲಿಯನ್ ಟನ್‌ನಿಂದ 1.180 ಎಂಟಿಪಿಎ ಗೆ ಹೆಚ್ಚಿಸಿ, 0.05 ಎಂಟಿಪಿಎ ಶುದ್ಧೀಕರಿಸಿದ ಮ್ಯಾಂಗನೀಸ್ ಹಾಗೂ 1.13 ಎಂಟಿಪಿಎ ಶುದ್ಧೀಕರಿಸಿದ ಕಬ್ಬಿಣದ ಅದಿರನ್ನು ಉತ್ಪಾದಿಸಲು ಯೋಜಿಸಲಾಗಿದೆ.

**ಹೊಸ ಘಟಕಗಳ ಸ್ಥಾಪನೆ:** ವಿಸ್ತರಣೆಯ ಭಾಗವಾಗಿ ಹೊಸದಾಗಿ 0.85 ಎಂಟಿಪಿಎ ಸಾಮರ್ಥ್ಯದ ಕಬ್ಬಿಣದ ಅದಿರಿನ ಪೆಲ್ಲೆಟ್ ಘಟಕ, 10000 Nm^3/Hr ಸಾಮರ್ಥ್ಯದ ಕೋಲ್ ಗ್ಯಾಸಿಫೈಯರ್ ಘಟಕ ಹಾಗೂ 10 ಎಂಡಬ್ಲ್ಯೂ ಸಾಮರ್ಥ್ಯದ ಸಹ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ.

**ಭೂಮಿ ಬಳಕೆ:** ಪ್ರಸ್ತುತ ಈ ಘಟಕವು ರಣಜಿತ್‌ಪುರ ಗ್ರಾಮದ ವಿವಿಧ ಸರ್ವೇ ನಂಬರ್‌ಗಳ ಒಟ್ಟು 86.18 ಹೆಕ್ಟೇರ್ ಪ್ರದೇಶದಲ್ಲಿದ್ದು, ವಿಸ್ತರಣೆಗಾಗಿ ಹೆಚ್ಚುವರಿಯಾಗಿ 10.84 ಹೆಕ್ಟೇರ್ ಭೂಮಿಯನ್ನು ಬಳಸಿಕೊಳ್ಳಲಾಗುತ್ತಿದೆ. ಇದರಿಂದಾಗಿ ಯೋಜನೆಯ ಒಟ್ಟು ವಿಸ್ತೀರ್ಣ 94.63 ಹೆಕ್ಟೇರ್ ಆಗಲಿದೆ.

ಹಾಗಾಗಿ ಪರಿಸರ ಆಘಾತ ಅಧ್ಯಯನ ಅಧಿಸೂಚನೆ ನಿಯಮಾವಳಿಗಳ ಅನ್ವಯ ಈ ಸಭೆಯನ್ನು ಕರೆಯಲಾಗಿದ್ದು, ಸಾರ್ವಜನಿಕರು ಹಾಗೂ ಆಸಕ್ತರು ಸಭೆಯಲ್ಲಿ ಭಾಗವಹಿಸಿ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಐಆರ್ ಕುರಿತು ಗ್ರಾಮೀಣ ಭಾಗದಲ್ಲಿ ಜಾಗೃತಿ ಮೂಡಲಿ : ಮಹಾದೇವ ಶ್ರೀ

▪ **ಗಣಿನಾಡವಾಣಿ ವಾರ್ತೆ, ಕುಕನೂರು**

ಮತದಾರರ ಪಟ್ಟಿ ಶುದ್ಧೀಕರಣ ಪ್ರಕ್ರಿಯೆ ಪ್ರಜಾಪ್ರಭುತ್ವದ ಬಲವರ್ಧನೆಗೆ ಅತ್ಯಂತ ಅಗತ್ಯವಾಗಿದ್ದು, ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ–2026 (SIR) ಕುರಿತು ಗ್ರಾಮೀಣ ಭಾಗದಲ್ಲಿ ವ್ಯಾಪಕ ಜಾಗೃತಿ ಮೂಡಿಸುವ ಕಾರ್ಯ ನಡೆಯಬೇಕು ಎಂದು ತಳಕಲ್ ಅನ್ನದಾನೀಶ್ವರ ಮಠದ ಪೂಜ್ಯ ಮಹಾದೇವ ಸ್ವಾಮೀಜಿ ಹೇಳಿದರು.

ಸೋಮವಾರ ಕುಕನೂರು ಪಟ್ಟಣದ ಅನ್ನದಾನೀಶ್ವರ ಮಠಕ್ಕೆ ತಾಲೂಕು ಮಟ್ಟದ ಅಧಿಕಾರಿಗಳ ತಂಡ ಭೇಟಿ ನೀಡಿ, ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ–2026 (SIR) ಕುರಿತು ಪೂಜ್ಯರಿಗೆ ಮಾಹಿತಿ ನೀಡಿ ಚರ್ಚಿಸಿತು.

ತಹಶೀಲ್ದಾರ್ ಬಸವರಾಜ ಬೆಣ್ಣೆಶಿರೂರ, ಸಿಡಿಪಿಐ ಬಿಟ್ಟದೇಶ ಬಾಳೆಕಾಯಿ, ಜಿಲ್ಲಾ ಆಹಾರ ಇಲಾಖೆ ಉಪನಿರ್ದೇಶಕ ವಿಶ್ವನಾಥ ಗೌಡ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸಂತೋಷ ಬಿರಾದಾರ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಾಗೇಶ ಹಾಗೂ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ವಿಜಯಲಕ್ಷ್ಮಿ ಮುಧೋಳ ಅವರು ಮಠಕ್ಕೆ ಭೇಟಿ ನೀಡಿ, ಎಸ್‌ಐಆರ್ ಕಾರ್ಯದ ಪ್ರಗತಿ, ಹೊಸ ಮತದಾರರ ಸೇರ್ಪಡೆ, ಹೆಸರು ತಿದ್ದುಪಡಿ, ಡಬಲ್ ಎಂಟ್ರಿ ತೆರವು ಹಾಗೂ ಮೃತ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡುವ ಪ್ರಕ್ರಿಯೆ ಕುರಿತು ವಿವರಿಸಿದರು.

ಜೊತೆಗೆ ಕರಡು ಮತದಾರರ ಪಟ್ಟಿಯ ಪ್ರತಿಯನ್ನು ಪೂಜ್ಯರಿಗೆ ಹಸ್ತಾಂತರಿಸಿ, ಸಾರ್ವಜನಿಕರಿಂದ ಆಕ್ಷೇಪಣೆ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಹಾದೇವ ಸ್ವಾಮೀಜಿ, "ಮತದಾರರ ಪಟ್ಟಿ ಶುದ್ಧವಾಗಿರುವುದು ಅತ್ಯಗತ್ಯ. ಗ್ರಾಮೀಣ ಭಾಗದಲ್ಲಿ ವ್ಯಾಪಕ ಜಾಗೃತಿ ಮೂಡಿಸಿ, ಒಬ್ಬ ಅರ್ಹ ಮತದಾರನೂ ಪಟ್ಟಿಯಿಂದ ಹೊರಗುಳಿಯದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಅನ್ನದಾನೀಶ್ವರ ಮಠದ ವತಿಯಿಂದಲೂ ಭಕ್ತರಿಗೆ ಎಸ್‌ಐಆರ್ ಕುರಿತು ಅರಿವು ಮೂಡಿಸಲಾಗುವುದು" ಎಂದು ತಿಳಿಸಿದರು.



"ಮತದಾನವು ಪ್ರಜಾಪ್ರಭುತ್ವದ ಅತ್ಯಂತ ಪವಿತ್ರ ಕರ್ತವ್ಯ. ಮತದಾರರ ಪಟ್ಟಿಯೇ ಪ್ರಜಾಪ್ರಭುತ್ವದ ಆಧಾರಸ್ತಂಭವಾಗಿದೆ. 18 ವರ್ಷ ಪೂರ್ಣಗೊಳಿಸಿರುವ ಪ್ರತಿಯೊಬ್ಬ ಯುವಕ–ಯುವತಿಯ ಹೆಸರು ಮತದಾರರ ಪಟ್ಟಿಯಲ್ಲಿ ಕಡ್ಡಾಯವಾಗಿ ಸೇರ್ಪಡೆಯಾಗಬೇಕು. ಮೃತಪಟ್ಟವರು ಹಾಗೂ ವಲಸೆ ಹೋದವರ ಹೆಸರುಗಳನ್ನು ತೆರವುಗೊಳಿಸಿ ಪಟ್ಟಿಯನ್ನು ಶುದ್ಧೀಕರಿಸಬೇಕು. ಯಾವುದೇ ಅರ್ಹ ಮತದಾರ ತನ್ನ ಮತದಾನದಹಕ್ಕಿನಿಂದವಂಚಿತನಾಗಬಾರದು. ಗ್ರಾಮೀಣ ಜನರು ತಮ್ಮ ಹಾಗೂ ಕುಟುಂಬದ ಸದಸ್ಯರ ಮತದಾರರ ವಿವರಗಳನ್ನು ಪರಿಶೀಲಿಸಿ, ಯಾವುದೇ ಲೋಪ ಕಂಡುಬಂದರೆ ತಕ್ಷಣ ಸರಿಪಡಿಸಿಕೊಳ್ಳಬೇಕು" ಎಂದು ಅವರು ಕರೆ ನೀಡಿದರು.

ತಹಶೀಲ್ದಾರ್ ಬಸವರಾಜ ಬೆಣ್ಣೆಶಿರೂರ ಮಾತನಾಡಿ, "ಪೂಜ್ಯರ ಮಾರ್ಗದರ್ಶನದೊಂದಿಗೆ ಎಸ್‌ಐಆರ್ ಕಾರ್ಯವನ್ನುಇನ್ನಷ್ಟುಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು. ಕರಡು ಮತದಾರರ ಪಟ್ಟಿಗೆ ಸಂಬಂಧಿಸಿದ ಆಕ್ಷೇಪಣೆಗಳನ್ನು ಸಲ್ಲಿಸಲು ಜುಲೈ 10ರವರೆಗೆ ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಅನ್ನದಾನೀಶ್ವರ ಮಠದ ಭಕ್ತಾದಿಗಳು ಉಪಸ್ಥಿತರಿದ್ದರು.

ಚಿತ್ರ ಶೀರ್ಷಿಕೆ: ಕುಕನೂರಿನ ಅನ್ನದಾನೀಶ್ವರ ಮಠದಲ್ಲಿ ಪೂಜ್ಯ ಮಹಾದೇವ ಸ್ವಾಮೀಜಿಯವರಿಗೆ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (SIR) ಕುರಿತು ಮಾಹಿತಿ ನೀಡುತ್ತಿರುವ ತಹಶೀಲ್ದಾರ್ ಬಸವರಾಜ ಬೆಣ್ಣೆಶಿರೂರ ಹಾಗೂ ಇತರ ಅಧಿಕಾರಿಗಳು.

## ಚುಟುಕು ಸುದ್ದಿಗಳು

### ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ನೋಂದಣಿ ಆರಂಭ - ಜುಲೈ 31 ಕೊನೆಯ ದಿನ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಪ್ರಸಕ್ತ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾಯೋಜನೆಯಡಿ ನೋಂದಾಯಿಸಿಕೊಳ್ಳಲು ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ತೋಟಗಾರಿಕೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಮುಂಗಾರು ಹಂಗಾಮಿನ ಅಧಿಸೂಚಿತ ಘಟಕಗಳಲ್ಲಿ ಸಂಭವಿಸಬಹುದಾದ ಹವಾಮಾನ ವೈಪರೀತ್ಯಗಳಾದ ಅಧಿಕ ಮಳೆ, ನೆರೆ/ಪ್ರವಾಹ, ಬೆಳೆ ಮುಳುಗಡೆ, ದೀರ್ಘಕಾಲದ ತೇವಾಂಶ ಕೊರತೆ, ತೀವ್ರ ಬರಗಾಲ ಹಾಗೂ ಸ್ಥಳ ನಿರ್ದಿಷ್ಟ ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ, ಮೇಘಸ್ಫೋಟ, ನೈಸರ್ಗಿಕ ಬೆಂಕಿ ಅವಗಢಗಳಿಂದ ಮತ್ತು ಕೊಯ್ಲೋತ್ತರ ನಷ್ಟಗಳಿಂದ ಬೆಳೆ ಹಾನಿ ಉಂಟಾದಲ್ಲಿ ನಿಯಮಾನುಸಾರ ವಿಮಾ ಸಂಸ್ಥೆಗಳ ಮೂಲಕ ಬೆಳೆ ನಷ್ಟ ಪರಿಹಾರವನ್ನು ರೈತರಿಗೆ ಒದಗಿಸುವ ಪ್ರಮುಖ ಉದ್ದೇಶವಾಗಿದೆ.

ಪ್ರಸ್ತುತ ಸಾಲಿನ ಮುಂಗಾರು ಹಂಗಾಮಿಗೆ ಕೆಂಪು ಮೆಣಸಿನಕಾಯಿ (ನೀರಾವರಿ) ಮತ್ತು ಈರುಳ್ಳಿ (ನೀರಾವರಿ) ಬೆಳೆಗಳನ್ನು ವಿಮಾ ಯೋಜನೆಯಡಿ ಒಳಪಡಿಸಲಾಗಿದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಎಸ್.ಬಿ.ಐ ಜನರಲ್ ಇನ್ಶೂರೆನ್ಸ್ ಕಂಪನಿ ವಿಮಾ ಸಂಸ್ಥೆಯಾಗಿ ಆಯ್ಕೆಯಾಗಿರುತ್ತದೆ.

**ಬೆಳೆವಾರು ವಿಮಾ ವಿವರ:**

**ಕೆಂಪು ಮೆಣಸಿನಕಾಯಿ (ನೀರಾವರಿ):** ಪ್ರತಿ ಹೆಕ್ಟೇರ್ ಗೆ ರೂ. 1,24,500 ವಿಮಾ ಮೊತ್ತ ನಿಗದಿಯಾಗಿದ್ದು, ರೈತರು ಶೇ.5 ರಷ್ಟು ಪ್ರೀಮಿಯಂ ಮೊತ್ತ ರೂ. 6,225 ಪಾವತಿಸಬೇಕಿರುತ್ತದೆ. (ಒಳಪಡುವ ಹೋಬಳಿಗಳು: ಕಂಪ್ಲಿ, ಕುರುಗೋಡು, ಕೋಳೂರು, ಬಳ್ಳಾರಿ, ಮೋಕಾ, ರೂಪನಗುಡಿ, ಸಿರುಗುಪ್ಪ, ಕರೂರು, ತೆಕ್ಕಲಕೋಟೆ, ಹಚ್ಚೊಳ್ಳಿ, ಸಂಡೂರು, ತೋರಣಗಲ್ಲು).

**ಈರುಳ್ಳಿ (ನೀರಾವರಿ):** ಪ್ರತಿ ಹೆಕ್ಟೇರ್ ಗೆ ರೂ. 93,900 ವಿಮಾ ಮೊತ್ತ ನಿಗದಿಯಾಗಿದ್ದು, ರೈತರು ಶೇ.5 ರಷ್ಟು ಪ್ರೀಮಿಯಂ ಮೊತ್ತ ರೂ. 4,695 ಪಾವತಿಸಬೇಕಿರುತ್ತದೆ. (ಒಳಪಡುವ ಹೋಬಳಿಗಳು: ಸಂಡೂರು, ಚೋರನೂರು, ತೋರಣಗಲ್ಲು).

**ನೋಂದಣಿ ಕೇಂದ್ರಗಳು ಹಾಗೂ ಅಗತ್ಯ ದಾಖಲೆಗಳು:**

ಅರ್ಹ ರೈತರು ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ, ಗ್ರಾಮ ಒನ್ ಅಥವಾ ಪ್ರಾಥಮಿಕ ಕೃಷಿ ಪತ್ತಿನ ಸೇವಾ ಸಹಕಾರಿ ಸಂಘಗಳಲ್ಲಿ ವಿಮೆ ನೋಂದಾಯಿಸಿಕೊಳ್ಳಬಹುದು. ನೋಂದಣಿಗೆ ಇತ್ತೀಚಿನ ಪಹಣಿ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಸ್ವಯಂ ದೃಢೀಕರಣ ಪತ್ರ ಹಾಗೂ ಎಫ್.ಐ.ಡಿ ದಾಖಲೆಗಳು ಅತ್ಯಗತ್ಯವಾಗಿವೆ.

ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ.), ಬಳ್ಳಾರಿ, ಕಂಪ್ಲಿ, ಕುರುಗೋಡು: 08392–278177, 9480257282, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ.), ಸಂಡೂರು: 08395–260389, 9740934208, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ.), ಸಿರುಗುಪ್ಪ: 08396–222066, 9448910277 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂಡೂರು ತಾಲೂಕಿನ ಕಾಳಂಗೇರಿ ಕಲ್ಲು ಗಣಿಗಾರಿಕೆ ಯೋಜನೆ : ಜುಲೈ 30 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಸಂಡೂರು ತಾಲೂಕಿನ ಕಾಳಂಗೇರಿ ಗ್ರಾಮದಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಎರಡು ಪ್ರತ್ಯೇಕ ಕಟ್ಟಡ ಕಲ್ಲು ಗಣಿಗಾರಿಕೆ ಯೋಜನೆಗಳ ಪ್ರಸ್ತಾವನೆಗೆ ಸಂಬಂಧಿಸಿದಂತೆ, ಸಾರ್ವಜನಿಕರಿಂದ ಅಭಿಪ್ರಾಯ ಹಾಗೂ ಆಕ್ಷೇಪಣೆಗಳನ್ನು ಆಲಿಸಲು ಜುಲೈ 30 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

**ಯೋಜನೆಯ ವಿವರ:** ಕಾಳಂಗೇರಿ ಗ್ರಾಮದ ಸರ್ವೆ ನಂ. 240 ರಲ್ಲಿ ಹಿರೇಮಠ ಕುಮಾರಸ್ವಾಮಿ ಹಾಗೂ ಕಾಳಂಗೇರಿ ಮಲ್ಲಿಕಾರ್ಜುನ ಅವರು ತಲಾ 2.50 ಎಕರೆ (1.012 ಹೆಕ್ಟೇರ್) ಪ್ರದೇಶದಲ್ಲಿ ವಾರ್ಷಿಕ 60,000 ಟನ್ ಸಾಮರ್ಥ್ಯದ ಕಟ್ಟಡ ಕಲ್ಲು ಗಣಿಗಾರಿಕೆ ಯೋಜನೆಯನ್ನು ಕೈಗೊಳ್ಳಲು ಪ್ರಸ್ತಾವನೆ ಸಲ್ಲಿಸಿದ್ದಾರೆ. ಈ ಎರಡೂ ಗುತ್ತಿಗೆ ಪ್ರದೇಶಗಳು ಪರಸ್ಪರ 500 ಮೀಟರ್ ಒಳಗಿನ ಅಂತರದಲ್ಲಿರುವುದರಿಂದ, ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ವೈಪರೀತ್ಯ ಸಚಿವಾಲಯದ ನಿಯಮಾವಳಿಗಳ ಪ್ರಕಾರ ಇದನ್ನು 'ಕ್ಲಸ್ಟರ್ ಪ್ರದೇಶ' ಎಂದು ಪರಿಗಣಿಸಲಾಗಿದೆ.

ಹಾಗಾಗಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ಜುಲೈ 30–ರಂದು ಮಧ್ಯಾಹ್ನ 03 ಗಂಟೆಗೆ ಯೋಜನೆ ನಡೆಯುವ ಪ್ರದೇಶ (ಕಾಳಂಗೇರಿ ಗ್ರಾಮ, ಸರ್ವೆ ನಂ. 240, ಸಂಡೂರು ತಾಲೂಕು, ಬಳ್ಳಾರಿ ಜಿಲ್ಲೆ) ಇಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ಆಯೋಜಿಸಲಾಗಿದೆ.

ಸಂಬಂಧಪಟ್ಟ ಗ್ರಾಮಸ್ಥರು ಹಾಗೂ ಸಾರ್ವಜನಿಕರು ಈ ಸಭೆಯಲ್ಲಿ ಭಾಗವಹಿಸಿ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದಾಗಿದೆ ಎಂದು ಬಳ್ಳಾರಿಯ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಆಹ್ವಾನ

▪ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಬಳ್ಳಾರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ (ಸಾಮಾನ್ಯ ಪದವಿ ಕೋರ್ಸಿನ ಬಾಲಕ ಮತ್ತು ಬಾಲಕಿಯರ) ವಿದ್ಯಾರ್ಥಿನಿಲಯಗಳ ಹೊಸ ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ 2026–27ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ.

**ಪೋಷಕರ ವಾರ್ಷಿಕ ಆದಾಯದ ಮಿತಿ:**

ಪ್ರವರ್ಗ–1, ಎಸ್.ಸಿ. ಮತ್ತು ಎಸ್.ಟಿ ವಿದ್ಯಾರ್ಥಿಗಳಿಗೆ ಗರಿಷ್ಠ ರೂ. 2.50 ಲಕ್ಷ. ಪ್ರವರ್ಗ–2ಎ, 2ಬಿ, 3ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗದವರಿಗೆ ಗರಿಷ್ಠ ರೂ. 1 ಲಕ್ಷ.

ಅರ್ಹ ವಿದ್ಯಾರ್ಥಿಗಳು https://ssp.karnataka.gov.in ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಜುಲೈ 20 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸುವಾಗ ಯಾವುದೇ ತಾಂತ್ರಿಕ ತೊಂದರೆಗಳು ಎದುರಾದಲ್ಲಿ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದು.

ಹೆಚ್ಚಿನಮಾಹಿತಿಗಾಗಿಮೊ.8050770004ಗೆಸಂಪರ್ಕಿಸಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆಗೆ ಸಾರ್ವಜನಿಕರು ಸಹಕರಿಸಿ : ಪರಣ್ಣ ಮುನವಳ್ಳಿ

■ **ಗಣಿನಾಡವಾಣಿ ವಾರ್ತೆ, ಗಂಗಾವತಿ**

ರಾಜ್ಯಾದ್ಯಂತ ಆರಂಭವಾಗಿರುವ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಕ್ರಿಯವಾಗಿ ಸಹಕರಿಸಿ, ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು, ವಿಳಾಸ ಹಾಗೂ ಇತರೆ ವಿವರಗಳನ್ನು ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಮಾಡಿಸಿಕೊಳ್ಳಬೇಕು ಎಂದು ಗಂಗಾವತಿ ಕ್ಷೇತ್ರದ ನಿಕಟಪೂರ್ವ ಶಾಸಕ ಪರಣ್ಣ ಮುನವಳ್ಳಿ ಕರೆ ನೀಡಿದರು.



ಅವರು ಮಾತನಾಡಿ, ಪ್ರಜಾಪ್ರಭುತ್ವದ ಯಶಸ್ಸಿಗೆ ನಿಖರ ಮತ್ತು ದೋಷರಹಿತ ಮತದಾರರ ಪಟ್ಟಿ ಅತ್ಯಂತ ಅಗತ್ಯವಾಗಿದೆ. 18 ವರ್ಷ ಪೂರ್ಣಗೊಂಡಿರುವ ಎಲ್ಲ ಅರ್ಹ ಯುವಕರು ಹೊಸದಾಗಿ ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಈಗಾಗಲೇ ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿರುವವರು ತಮ್ಮ ವೈಯಕ್ತಿಕ ಮಾಹಿತಿಯನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ತಿದ್ದುಪಡಿ ಹಾಗೂ ಸ್ಥಳಾಂತರಕ್ಕೆ ಸಂಬಂಧಿಸಿದ ಅರ್ಜಿಗಳನ್ನು ಸಲ್ಲಿಸಬೇಕು ಎಂದು ತಿಳಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದ್ದು, ಪ್ರತಿಯೊಬ್ಬ ನಾಗರಿಕರು ಚುನಾವಣಾ ಅಧಿಕಾರಿಗಳಿಗೆ ಅಗತ್ಯ ದಾಖಲೆಗಳನ್ನು ನೀಡಿ ಸಹಕರಿಸಬೇಕು. ಇದರಿಂದ ನಿಖರ ಹಾಗೂ ಪಾರದರ್ಶಕ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ನಂತರ ಮಾತನಾಡಿದ ಮಾಜಿ ನಗರಸಭೆ ಸದಸ್ಯ ಪರಶುರಾಮ ಮಡ್ಡೇರ, ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮವು ಚುನಾವಣಾ ಪ್ರಕ್ರಿಯೆಯನ್ನು ಇನ್ನಷ್ಟು ಪಾರದರ್ಶಕ ಹಾಗೂ ವಿಶ್ವಾಸಾರ್ಹವಾಗಿಸಲು ಸಹಕಾರಿಯಾಗಲಿದೆ. ಆದ್ದರಿಂದ ಸಾರ್ವಜನಿಕರು ಈ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಚುನಾವಣಾ ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾಜಿ ನಗರಸಭೆ ಸದಸ್ಯ ಮುಷ್ತಾಕ್ ಅಲಿ, ಮುಖಂಡರಾದ ಟಿ.ಆರ್. ರಾಯಾಬಾಗಿ, ಬಸವರಾಜ ನಿಟ್ಟಾಲಿ, ಗುರುಪ್ಪ, ಅಂದಪ್ಪ, ರವಿ ಪವಾಡ, ವೇಣು ಯಲಿಗಾರ್, ಪ್ರಭು ಯರಿಗೇರಿ, ಬಿಎಲ್‌ಎಗಳಾದ ಶರಣಯ್ಯಸ್ವಾಮಿ, ನಾಗರಾಜ, ಮಹಾದೇವಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶ್ರೀ ವಿಜಯದಾಸರ ಮಹಿಮೆ ಅಪಾರ : ನ್ಯಾ.ವಿ. ಶ್ರೀಶಾನಂದ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**



ದಾಸರಲ್ಲಿ ಶ್ರೇಷ್ಠ ದಾಸರು ಶ್ರೀ ವಿಜಯದಾಸರು, ಅವರ ಮಹಿಮೆ ಬಲು ಅಪಾರ, ಭಕ್ತಿಯಿಂದ ವಿಜಯರಾಯರನ್ನು ಸ್ಮರಿಸಿದರೆ ಸಕಲ ಕಷ್ಟಗಳು ನಿವಾರಣೆಯಾಗಲಿವೆ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶ ವಿ. ಶ್ರೀಶಾನಂದ ಅವರು ಹೇಳಿದರು.

ನಗರದ ಸತ್ಯನಾರಾಯಣ ಪೇಟೆ ಶ್ರೀರಾಘವೇಂದ್ರ ಸ್ವಾಮಿ ಶ್ರೀಮಠದ ಸಭಾಂಗಣದಲ್ಲಿ ಭಾನುವಾರ ಸಂಜೆ ಶ್ರೀರಾಘವೇಂದ್ರ ಸ್ವಾಮಿ ಮಠ, ವಸುದೈವ ಕುಟುಂಬಕಂ ಪ್ರತಿಷ್ಠಾನ ಹಾಗೂ ಪುನರುತ್ಥಾನ ಅಧ್ಯಯನ ಕೇಂದ್ರ ಬಳ್ಳಾರಿ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 'ಬೀಸಿ ಬಿಸಾಟದಿರು ಬಿಂಕದ ದೈವ – ವಿಜಯರಾಯ' ಪುಸ್ತಕ ಅನಾವರಣ ನಿಮಿತ್ತ ಹಮ್ಮಿಕೊಂಡಿದ್ದ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಷ್ಟಗಳು ಬಂದಾಗ ದೇವರನ್ನು, ಯತಿಗಳನ್ನು, ದಾಸವರೇಣ್ಯರನ್ನು ಸ್ಮರಿಸಿದರೆ ಸಾಲದು, ದೇವರ ಸ್ಮರಣೆ ನಿತ್ಯದ ನಮ್ಮ ಭಕ್ತಿಯ ಕೆಲಸವಾಗಬೇಕು, ನಮ್ಮ ಸ್ಮರಣೆ, ನಮ್ಮ ಭಕ್ತಿ ನಿರಂತರವಾಗಿದ್ದರೆ, ಖಂಡಿತ ಎದುರಾಗುವ ಎಲ್ಲ ಕಷ್ಟಗಳು ನಿವಾರಣೆಯಾಗಲಿವೆ ಎಂದರು.

ಹೈದರಾಬಾದ್‌ನ ಖ್ಯಾತ ಅನುವಾದಕರಾದ, ಕವಿ ರಮೇಶ್ ಬಾಬು ಚಂದಕ ಚರ್ಲ ಅವರು, 'ಬೀಸಿ ಬಿಸಾಟದಿರು ಬಿಂಕದ ದೈವ – ವಿಜಯರಾಯ' ಪುಸ್ತಕ ಅನಾವರಣಗೊಳಿಸಿ ಮಾತನಾಡಿ, ದಾಸಪರಂಪರೆಯ ಶ್ರೀ ವಿಜಯದಾಸರನ್ನು ಎಷ್ಟು ಸ್ಮರಿಸಿದರು ಸಾಲದು, ಅವರೊಬ್ಬ ಮಹಾಮಹಿಮರು. ವಿಜಯದಾಸರ ಕುರಿತು ರಚಿಸಿದ ಈ ಪುಸ್ತಕ ಅತ್ಯಂತ ಅದ್ಭುತವಾಗಿ ಮೂಡಿಬಂದಿದೆ, ಪ್ರತಿಯೊಬ್ಬರು ಖರೀದಿಸಬೇಕು ಎಂದು ಮನವಿ ಮಾಡಿದರು.

ಇದಕ್ಕೂ ಮುನ್ನ ಮಂತ್ರಾಲಯದ ಶ್ರೀ ರಾಘವೇಂದ್ರ ಸಾಹಿತ್ಯ ಪ್ರತಿಷ್ಠಾನದ ಸಂಚಾಲಕ ಪಂ.ಸುಳಾದಿ ಹನುಮೇಶ ದಾಸರು ಅವರಿಂದ ದಾಸವರೇಣ್ಯ ಶ್ರೀ ವಿಜಯದಾಸರ ಕುರಿತು ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಶ್ರೀರಾಘವೇಂದ್ರ ಸ್ವಾಮಿ ಮಠದ ಆಡಳಿತಾಧಿಕಾರಿ ಪಂ.ಪ್ರಸನ್ನಾಚಾರ, ಬಳ್ಳಾರಿಯ ಪುನರುತ್ಥಾನ ಅಧ್ಯಯನ ಕೇಂದ್ರದ ಶ್ರೀನಾಥ್ ಜೋಶಿ, ಹಿರಿಯ ನ್ಯಾಯವಾದಿಗಳಾದ ಡಾಣಾಪೂರ ಶ್ರೀನಿವಾಸ್, ಮಧುಸೂಧನ್ ರಾವ್, ಹೊಸಪೇಟೆಯ ಡಾ.ರಾಘವೇಂದ್ರ ಆಚಾರ, ಶ್ರೀನಿವಾಸ್ ದಾಸ್, ನರಸಿಂಹ ಮೂರ್ತಿ, ರಘುನಂದನ್ ಸೇರಿದಂತೆ ಇತರರಿದ್ದರು.

# ದಲಿತರ ಹಕ್ಕುಗಳ ಈಡೇರಿಕೆಗೆ ಜು. 3ರಿಂದ ಅನಿರ್ದಿಷ್ಟ ಹೋರಾಟ : ಹುಸೇನ್ನಪ್ಪ

■ ಮೊದಲ ಪುಟದಿಂದ

ಈ ಎಲ್ಲ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಜುಲೈ 3ರಿಂದ ರಾಜ್ಯಾದ್ಯಂತ ಅನಿರ್ದಿಷ್ಟ ಹಕ್ಕೊತ್ತಾಯ ದಲಿತ ಜನಾಗ್ರಹ ಸಮಾವೇಶ ಹಾಗೂ ಪ್ರತಿಭಟನೆ ಆರಂಭಿಸಲಾಗುವುದು. ಸರ್ಕಾರದ ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸಲು ಶೋಷಿತ ಸಮುದಾಯದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಕರೆ ನೀಡಿದರು.ಈ ಸುದ್ದಿಗೋಷ್ಠಿಯಲ್ಲಿ ಪಿ. ತಾಯಪ್ಪ, ಎ.ಕೆ. ಗಂಗಾಧರ, ತಿಪ್ಪೇಸ್ವಾಮಿ ಸಿರಿಗೇರಿ, ರಾಜೋಟಪ್ಪ, ಗುಂಡಪ್ಪ ಬೈಲೂರು, ಹೆಚ್. ಚಿಕ್ಕಗಾದಿಲಿಂಗಪ್ಪ, ಈರಪ್ಪ, ಹೆಚ್. ಲಾಲೆಪ್ಪ, ಕೆ. ಪ್ರಕಾಶ್ ಹಾಗೂ ರಾಜಶೇಖರ್ ದೇವೇಂದ್ರ ಉಪಸ್ಥಿತರಿದ್ದರು.

# ಕರಾಮುವಿ : ಪ್ರವೇಶಾತಿ ಪ್ರಾರಂಭ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಶೈಕ್ಷಣಿಕ ವರ್ಷ 2026–27ರ ಜುಲೈ ಆವೃತ್ತಿಯ ಪ್ರವೇಶಾತಿ ಪ್ರಕ್ರಿಯೆಯನ್ನು ಆರಂಭಿಸಿದೆ. ಯುಜಿಸಿ ಅನುಮೋದಿತ ವಿವಿಧ ಪದವಿ, ಸ್ನಾತಕೋತ್ತರ ಪದವಿ (ಎಂ.ಎಸ್.ಡಬ್ಲ್ಯೂ, ಎಂ.ಲಿಬ್.ಐ.ಎಸ್ಸಿ.), ಪಿಜಿ ಸರ್ಟಿಫಿಕೇಟ್, ಡಿಪ್ಲೋಮಾ ಹಾಗೂ ಸರ್ಟಿಫಿಕೇಟ್ ಶಿಕ್ಷಣಕ್ರಮಗಳಿಗೆ ಈಗಾಗಲೇ ಆನ್‌ಲೈನ್ ಮೂಲಕ ಪ್ರವೇಶಾತಿ ಪ್ರಾರಂಭವಾಗಿದೆ ಎಂದು ಬಳ್ಳಾರಿ ಪ್ರಾದೇಶಿಕ ಕೇಂದ್ರದ ಪ್ರಾದೇಶಿಕ ನಿರ್ದೇಶಕ ನಾಗೇಶ್ ಎಂ. ಅವರು ತಿಳಿಸಿದ್ದಾರೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 15 ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸಲು ಅಧಿಕೃತ ವೆಬ್‌ಸೈಟ್ www.ksoumysuru.ac.in ಗೆ ಭೇಟಿ ನೀಡಬಹುದಾಗಿದೆ.

**ವಿಶೇಷ ಶುಲ್ಕ ವಿನಾಯಿತಿ ಮತ್ತು ರಿಯಾಯಿತಿಗಳು:**

ಬಿಪಿಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ, ಡಿಫೆನ್ಸ್ / ಎಕ್ಸ್ ಸರ್ವೀಸ್‌ಮನ್ ಅಭ್ಯರ್ಥಿಗಳಿಗೆ, ಆಟೋ ಮತ್ತು ಕ್ಯಾಬ್ ಚಾಲಕರು ಹಾಗೂ ಅವರ ಮಕ್ಕಳಿಗೆ ಬೋಧನಾ ಶುಲ್ಕದಲ್ಲಿ ವಿಶೇಷ ರಿಯಾಯಿತಿ ಇರಲಿದೆ.

ಕೋವಿಡ್‌ನಿಂದಾಗಿ ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ, ದೃಷ್ಟಿಹೀನ ವಿದ್ಯಾರ್ಥಿಗಳಿಗೆ ಹಾಗೂ ತೃತೀಯ ಲಿಂಗಿಗಳಿಗೆ ಸಂಪೂರ್ಣ ಶುಲ್ಕ ವಿನಾಯಿತಿ ನೀಡಲಾಗುವುದು.ಅರ್ಜಿ ಸಲ್ಲಿಸುವಾಗ ಯಾವುದೇ ತಾಂತ್ರಿಕ ತೊಂದರೆಗಳು ಎದುರಾದಲ್ಲಿ ವಿದ್ಯಾರ್ಥಿಗಳು ಆನ್‌ಲೈನ್ ಸಹಾಯವಾಣಿ ಮೊ.8800335638 / 8690544544 ಹಾಗೂ ಹೆಚ್ಚಿನ ಮಾಹಿತಿಗಾಗಿ ಮೊ.9986696487 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಪತ್ರಿಕಾ ದಿನಾಚರಣೆ ಹಾಗೂ ವಿಚಾರ ಸಂಕಿರಣ

■ **ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತ ಆಶ್ರಯದಲ್ಲಿ 2026ರ ಜುಲೈ 1 ರಂದು ಪತ್ರಿಕಾ ದಿನಾಚರಣೆ–2026 ಅನ್ನು ಹಮ್ಮಿಕೊಳ್ಳಲಾಗಿದೆ.

ಪತ್ರಿಕೋದ್ಯಮಕ್ಕೆ ನಾಂದಿ ಹಾಡಿದ ಬಾಸೆಲ್ ಮಿಷನ್‌ನ ರೆವರೆಂಡ್ ಹರ್ಮನ್ ಮೊಗ್ಲಿಂಗ್ ಅವರು 1843 ರ ಜುಲೈ 1 ರಂದು ಪ್ರಕಟಿಸಿದ "ಮಂಗಳೂರ ಸಮಾಚಾರ" ಪತ್ರಿಕೆಯ ಸವಿನೆನಪಿಗಾಗಿ ಪ್ರತಿ ವರ್ಷ ಜುಲೈ 1 ಅನ್ನು ಕನ್ನಡ ಪತ್ರಿಕಾ ದಿನವನ್ನಾಗಿ ಆಚರಿಸಲಾಗುತ್ತದೆ. 1996 ರಲ್ಲಿ ಅಂದಿನ ಪತ್ರಿಕಾ ಅಕಾಡೆಮಿ ಅಧ್ಯಕ್ಷರಾಗಿದ್ದ ದಿ. ಕೆ. ಶ್ರೀಧರ ಆಚಾರ್ ಅವರು ಈ ಪರಂಪರೆಯನ್ನು ಪ್ರಾರಂಭಿಸಿದ್ದು, ಅಂದಿನಿಂದ ನಾಡಿನಾದ್ಯಂತ ಇದನ್ನು ನಿರಂತರವಾಗಿ ಆಚರಿಸಿಕೊಂಡು ಬರಲಾಗುತ್ತಿದೆ. ಬೆಂಗಳೂರಿನ ಗಾಂಧಿ ಭವನದ ಮಹಾದೇವ ದೇಸಾಯಿ ಸಭಾಂಗಣದಲ್ಲಿ 2026 ನೇ ಜುಲೈ 01 ರಂದು ಬೆಳಗ್ಗೆ 11:00 ಗಂಟೆಗೆ ಈ ಕಾರ್ಯಕ್ರಮದ ಉದ್ಘಾಟನೆ ಹಾಗೂ ಅಕಾಡೆಮಿಯ ವಾರ್ಷಿಕ ವರದಿ ಬಿಡುಗಡೆಯನ್ನು ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ನೆರವೇರಿಸಲಿದ್ದಾರೆ.

ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಸಂಸದರಾದ ಪಿ. ಸಿ. ಮೋಹನ್ ಹಾಗೂ ತೆಲಂಗಾಣ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಕೆ. ಶ್ರೀನಿವಾಸ ರೆಡ್ಡಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಗಾಂಧಿ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ದಿನೇಶ್ ಗುಂಡೂ ರಾವ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

**ವಿಚಾರ ಸಂಕಿರಣ ಮತ್ತು ಪ್ರಧಾನ ಭಾಷಣ:** ಪತ್ರಿಕಾ ದಿನಾಚರಣೆಯ ಅಂಗವಾಗಿ ಡಿಜಿಟಲ್ ಯುಗದಲ್ಲಿ ನಿಜ ಪತ್ರಕರ್ತರು ಯಾರು? ಎಂಬ ವಿಷಯದ ಕುರಿತು ವಿಶೇಷ ವಿಚಾರ ಸಂಕಿರಣ ಆಯೋಜಿಸಲಾಗಿದೆ. 'ವಾರ್ತಾ ಭಾರತಿ'ಯ ಹಿರಿಯ ಪತ್ರಕರ್ತರಾದ ಅಬ್ದುಸ್ಸಲಾಂ ಪುತ್ತಿಗೆ ಅವರು ಪ್ರಧಾನ ಭಾಷಣ ಮಾಡಲಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ಕಾರ್ಯಕ್ರಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಎಂ.ಎನ್. ಅನುಚೇತ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಕರ್ನಾಟಕ ಪತ್ರಕರ್ತೆಯರ ಸಂಘದ ಅಧ್ಯಕ್ಷರಾದ ಡಾ. ಆರ್. ಪೂರ್ಣಿಮಾ ಹಾಗೂ ಸಂಘದ ಪ್ರಧಾನ ಕಾರ್ಯದರ್ಶಿಗಳಾದ ಜಿ. ಸಿ. ಲೋಕೇಶ ಅವರು ಗೌರವ ಉಪಸ್ಥಿತರಿರಲಿದ್ದಾರೆ. ಕಾರ್ಯಕ್ರಮಕ್ಕೆ ಸರ್ವರಿಗೂ ಆದರದ ಸುಸ್ವಾಗತವನ್ನು ಕೋರಲಾಗಿದೆ.

# ಹನುಮೇಶ್ ವರ್ಗಾವಣೆ : ಬೀಳ್ಕೊಡುಗೆ ಸಮಾರಂಭದಲ್ಲಿ ಭಾವುಕ

■ **ಗಣಿನಾಡವಾಣಿ ವಾರ್ತೆ, ಬಳ್ಳಾರಿ**

ಪರಮದೇವನಹಳ್ಳಿ (ಹಗರಿ) ಪೊಲೀಸ್ ಠಾಣೆಯಲ್ಲಿ ಕಳೆದ ಮೂರು ವರ್ಷಗಳಿಂದ ಕರ್ತವ್ಯ ನಿರ್ವಹಿಸಿದ್ದ ಪೊಲೀಸ್ ಸಿಬ್ಬಂದಿ ಜಿ. ಹನುಮೇಶ್ ಅವರು ಕುರುಗೋಡು ಪೊಲೀಸ್ ಠಾಣೆಗೆ ವರ್ಗಾವಣೆಯಾಗಿದ್ದು, ಈ ಹಿನ್ನೆಲೆಯಲ್ಲಿ ಅವರಿಗೆ ಹಗರಿ ಪೊಲೀಸ್ ಠಾಣೆಯಲ್ಲಿ ಆತ್ಮೀಯ ಬೀಳ್ಕೊಡುಗೆ ಸಮಾರಂಭ ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿ. ಹನುಮೇಶ್ ಅವರು, 2018ರಿಂದ 2023ರವರೆಗೆ ಪೊಲೀಸ್ ಇಲಾಖೆಯಲ್ಲಿ ಐದು ವರ್ಷಗಳ ಕಾಲ ಸೇವೆ ಸಲ್ಲಿಸಿದ ಬಳಿಕ ಎಪಿಎಂಸಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿದ್ದು, ನಂತರ ಪರಮದೇವನಹಳ್ಳಿ (ಹಗರಿ) ಪೊಲೀಸ್ ಠಾಣೆಯಲ್ಲಿ ಮೂರು ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿರುವುದಾಗಿ ತಿಳಿಸಿದರು. ಇದೀಗ ಕುರುಗೋಡು ಪೊಲೀಸ್ ಠಾಣೆಗೆ ವರ್ಗಾವಣೆಯಾಗಿರುವುದು ಹೊಸ ಜವಾಬ್ದಾರಿಯಾಗಿದ್ದು, ಹಿಂದಿನಂತೆಯೇ ಪ್ರಾಮಾಣಿಕತೆ ಹಾಗೂ ಜನಸೇವೆಯ ಮನೋಭಾವದಿಂದ ಕರ್ತವ್ಯ ನಿರ್ವಹಿಸುವುದಾಗಿ ಹೇಳಿದರು.



ತಮ್ಮ ವರ್ಗಾವಣೆ ಬೀಳ್ಕೊಡುಗೆ ಸಮಾರಂಭ ಯಶಸ್ವಿಯಾಗಿ ನಡೆಯಲು ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಕರಿಸಿದ ಹಿರಿಯ ಅಧಿಕಾರಿಗಳು, ಸಹೋದ್ಯೋಗಿಗಳು ಮತ್ತು ಸಿಬ್ಬಂದಿಗೆ ಅವರು ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಶ್ರೀ ಎಂ.ಜಿ. ತಿಮ್ಮರೆಡ್ಡಿ, ಪ್ರೊಬೇಷನರಿ ಪಿಎಸ್‌ಐ ಶ್ರೀಮತಿ ಕುಮಾರಿ ಮಾಧುರಿ, ಎಎಸ್‌ಐ ದುರ್ಗಾಪ್ರಸಾದ್ ಸೇರಿದಂತೆ ಕುಮಾರಸ್ವಾಮಿ, ಕನಕರಾಯ, ಕಾಂತರಾಜ, ಮಂಜುನಾಥ, ಹೊನ್ನೂರಪ್ಪ, ನಾಗೇಶ್, ಮುತ್ತಮ್ಮ, ಜಾಸ್ಮಿನ್, ನೇತ್ರಾವತಿ, ನಾಗರಾಜ್, ರೇವಣ್ಣ ಸಿದ್ದಪ್ಪ, ಲೋಕೇಶ್, ಕಿರಣ್ ಕುಮಾರ್, ತಲಪಾತಿ ನರೇಶ್, ಮಹಮ್ಮದ್ ಗೌಸ್, ಗೋಪಿ, ಸುರೇಶ್ ಹಾಗೂ ಇತರ ಪೊಲೀಸ್ ಸಿಬ್ಬಂದಿ ಮತ್ತು ಸ್ನೇಹಿತರು ಉಪಸ್ಥಿತರಿದ್ದು ಶುಭ ಹಾರೈಸಿದರು.

ಕಾರ್ಯಕ್ರಮದ ಕೊನೆಯಲ್ಲಿ ಜಿ. ಹನುಮೇಶ್ ಅವರು, ತಮ್ಮ ಸೇವಾ ಅವಧಿಯಲ್ಲಿ ಸಹಕಾರ ನೀಡಿದ ಪ್ರತಿಯೊಬ್ಬರನ್ನೂ ಸ್ಮರಿಸಿ, ಎಲ್ಲರಿಗೂ ದೇವರು ಉತ್ತಮ ಆರೋಗ್ಯ, ಸುಖ, ಸಂತೋಷ ಹಾಗೂ ಯಶಸ್ಸು ನೀಡಲಿ ಎಂದು ಹಾರೈಸಿದರು.

# 2028 ರೊಳಗೆ ಮಾದಕ ವ್ಯಸನ ಮುಕ್ತ ಕರ್ನಾಟಕ

■ **ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಕರ್ನಾಟಕ ರಾಜ್ಯವನ್ನು 2028 ರೊಳಗೆ ಮಾದಕ ವ್ಯಸನ ಮುಕ್ತ ಕರ್ನಾಟಕವಾಗಿಸಲು ಇಂದು ನಾವು ಪ್ರತಿಜ್ಞೆ ಮಾಡಿದ್ದೇವೆ. ಮಾದಕ ವ್ಯಸನವನ್ನು ಸಮಾಜದಿಂದ ಮುಕ್ತ ಮಾಡಲು ಎಲ್ಲಾ ನಾಗರೀಕರು ಕೈಜೋಡಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.



ಕಂಠೀರವ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯು ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಾದಕ ವ್ಯಸನ ಮತ್ತು ಕಳ್ಳಸಾಗಾಣಿಕೆ ವಿರೋಧಿ ದಿನ – 2026 ರ ಕಾರ್ಯಕ್ರಮವನ್ನು ಮಕ್ಕಳೊಂದಿಗೆ ಉದ್ಘಾಟಿಸಿ, ಮಾತನಾಡಿದ ಮುಖ್ಯಮಂತ್ರಿಗಳು ಮಾದಕ ವಸ್ತುಗಳಿಂದ ಹೆಚ್ಚುತ್ತಿರುವ ಅಪಾಯವನ್ನು ತಡೆಗಟ್ಟಲು ಸರ್ಕಾರವು ಮಾದಕ ವಸ್ತು ವಿರೋಧಿ ಕಾರ್ಯಪಡೆಯನ್ನು ಸ್ಥಾಪಿಸಿದೆ ಎಂದರು.

ಕಳೆದ ಮೂರು ವರ್ಷಗಳಲ್ಲಿ ಪೊಲೀಸ್ ಇಲಾಖೆ ದೊಡ್ಡ ಪ್ರಯತ್ನ ಮಾಡಿ, 80 ಕೋಟಿ ವೆಚ್ಚದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡು ನಾಶ ಪಡಿಸಲಾಗಿದೆ. ಈ ಕಾರ್ಯಕ್ಕೆ ಕೈಜೋಡಿಸಿದ ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳಿಗೆ ಹಾಗೂ ಸಹಾಯ ಮಾಡಿದ ಎಲ್ಲರಿಗೂ ಸರ್ಕಾರ ಅಭಿನಂದನೆ ಸಲ್ಲಿಸುತ್ತದೆ ಎಂದು ಹೇಳಿದರು.

ಯುವಕರು ಮಾದಕ ವಸ್ತುಗಳ ಬಳಕೆಯಿಂದ ದೂರವಿರಬೇಕು, ಮದ್ಯ ವ್ಯಸನಕ್ಕೆ ಯಾರಾದರೂ ಒತ್ತಾಯ ಮಾಡಿದರೆ ಇಂದಿನ ಯುವಕರು ಯಾವುದೇ ಕಾರಣಕ್ಕೂ ಒತ್ತಡಕ್ಕೆ ಮಣಿಯದೇ ಪೋಷಕರಿಗೆ ಅಥವಾ ಪೊಲೀಸ್ ಇಲಾಖೆಗೆ ತಿಳಿಸಬೇಕು. ಶಾಲಾ–ಕಾಲೇಜುಗಳ ಸುತ್ತಮುತ್ತ ಇಂತಹವರ ಬಗ್ಗೆ ಮಾಹಿತಿ ಕಂಡುಬಂದರೆ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದರೆ ಮಾಹಿತಿ ನೀಡಿದರವರ ಹೆಸರನ್ನು ಬಹಿರಂಗಪಡಿಸುವುದಿಲ್ಲ. ಮಕ್ಕಳೇನಾದರೂ ಈ ಚಟಕ್ಕೆ ಒಳಗಾಗಿದ್ದರೆ ಪೋಷಕರು ಗೌರವ ಹೋಗುತ್ತದೆ ಎಂದು ಮುಚ್ಚಿಡಬಾರದು. ಈ ಹವ್ಯಾಸ ಮುಚ್ಚಿಟ್ಟರೆ ಮಕ್ಕಳ ಭವಿಷ್ಯ ಹಾಳಾಗುತ್ತದೆ. ಈ ನಿಟ್ಟಿನಲ್ಲಿ ಪೊಲೀಸರ ಸಹಾಯ ಪಡೆದು ಮದ್ಯವ್ಯಸನಿಗಳಾಗದಂತೆ ತಡೆಯಬೇಕೆಂದರು.

ವ್ಯಸನಮುಕ್ತ ಕರ್ನಾಟಕ ಕೇವಲ ಸರ್ಕಾರದ ಘೋಷಣೆಯಲ್ಲ, ಇದು ಪ್ರತಿಯೊಬ್ಬ ಕನ್ನಡಿಗರ ಸಂಕಲ್ಪ. ಯುವಕರು ಆದರ್ಶ ಬದುಕಿನ ಜೀವನ ಸಾಗಿಸಬೇಕು. ಕುಟುಂಬದ ಭವಿಷ್ಯರೂಪಿಸಲು ಪ್ರಗತಿಯತ್ತ ನಡೆಯಬೇಕು. ಅಮಲು ಪದಾರ್ಥಗಳನ್ನು ಬೆರೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದಲ್ಲಿ ಮಾದಕ ವಸ್ತುಗಳ ಅಕ್ರಮ ಜಾಲಗಳ ವಿರುದ್ಧ ಈಗಾಗಲೇ ತೀವ್ರ ಮತ್ತು ನಿರಂತರ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಮಾದಕ ವಸ್ತುಗಳ ಅಕ್ರಮ ವ್ಯಾಪಾರದಲ್ಲಿ ತೊಡಗಿಸಿಕೊಂಡಿರುವ ಜಾಲಗಳನ್ನು ಪತ್ತೆಹಚ್ಚಿ ನಿರ್ಮೂಲನಾ ಗೊಳಿಸಲು ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಂಡಿದೆ. ಮಾದಕ ವಸ್ತುಗಳ ಅಕ್ರಮ ವ್ಯಾಪಾರದಲ್ಲಿ ಭಾಗಿಯಾಗಿರುವ ಹಾಗೂ ವೀಸಾ ಅವಧಿ ಮುಕ್ತಾಯಗೊಂಡಿದ್ದರೂ ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳ ಮೇಲೆ ನಿಗಾವಹಿಸುವ ಉದ್ದೇಶದಿಂದ ವಿಶೇಷ ಶೋಧ ಪತ್ತೆ ಕಾರ್ಯಾಚರಣೆ ನಡೆಸಲಾಗಿದ್ದು, ಇದರ ಪರಿಣಾಮವಾಗಿ 20 ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ ಎಂದರು.

2025 ರಲ್ಲಿ ಒಟ್ಟು 216.93 ಕೋಟಿ ರೂಗಳನ್ನು ವಶಪಡಿಸಿಕೊಳ್ಳಲಾಗಿದೆ. 9064 ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

2611 ಮಾರಾಟಗಾರರ ವಿರುದ್ಧ, 6455 ಗ್ರಾಹಕರ ವಿರುದ್ಧ ಹಾಗೂ 41 ತಯಾರಕರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ. 2026 ಜನವರಿಯಿಂದ ಮೇ ಅಂತ್ಯದವರೆಗೆ ಒಟ್ಟು 184.72 ಕೋಟಿ ರೂಗಳನ್ನು ವಶಪಡಿಸಿಕೊಳ್ಳಲಾಗಿದೆ. 6651 ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. 1406 ಮಾರಾಟಗಾರರ ವಿರುದ್ಧ, 5090 ಗ್ರಾಹಕರ ವಿರುದ್ಧ ಹಾಗೂ 17 ತಯಾರಕರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ.

ಗೃಹ, ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಮಾತನಾಡಿ, ಮಾದಕ ವ್ಯಸನವು ಯುವಕರ ಸಾಮರ್ಥ್ಯ, ಆರ್ಥಿಕತೆ ಮತ್ತು ಸಮಾಜವನ್ನು ನಾಶ ಮಾಡುತ್ತದೆ, ಈ ಬಗ್ಗೆ ಜಾಗೃತಿ ಮೂಡಿಸುವುದು ಅವಶ್ಯಕವಾಗಿದೆ. ಇಂದು ಆಚರಿಸಲಾಗುತ್ತಿರುವ ಅಂತಾರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನಾಚರಣೆ ಅಂಗವಾಗಿ ಸರ್ಕಾರವು "ಆಪರೇಷನ್ ರೈಸ್ (ಔಶಿಜಡಿಚಿಣಟಿಂಟ ಖಿಖಖಇ)" ಹಾಗೂ "ಬೇಡ ಬ್ರೋ" ಎಂಬ ಎರಡು ಮಹತ್ವದ ಕಾರ್ಯಕ್ರಮಗಳಿಗೆ ಇಂದು ಮುಖ್ಯಮಂತ್ರಿಗಳು ಚಾಲನೆ ನೀಡಿದ್ದಾರೆ. ಈ ಕಾರ್ಯಕ್ರಮಗಳ ಮೂಲಕ ಮಾದಕ ವಸ್ತುಗಳ ಸಮಸ್ಯೆಯನ್ನು ಸರ್ಕಾರದ ಎಲ್ಲಾ ಇಲಾಖೆಗಳ ಸಹಭಾಗಿತ್ವದೊಂದಿಗೆ ಎದರಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ ಎಂದು ಹೇಳಿದರು.

ರೈಸ್ ಎಂಬ ಉಪಕ್ರಮವು ನಿರಾಕರಣೆ, ಮಾಹಿತಿ ನೀಡುವಿಕೆ, ಬೆಂಬಲ ನೀಡುವಿಕೆ, ಸಬಲೀಕರಣ ಎಂಬ ತತ್ವಗಳ ಆಧಾರದ ಮೇಲೆ ರೂಪಿಸಲಾಗಿದೆ.

"ಬೇಡ ಬ್ರೋ" ಅಭಿಯಾನವು ಯುವಜನರನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳುವ ಮೂಲಕ ಶಿಕ್ಷಣ ಮತ್ತು ಸಮುದಾಯದ ಸಹಭಾಗಿತ್ವದ ಮೂಲಕ ಮಾದಕ ವ್ಯಸನವನ್ನು ತಡೆಗಟ್ಟಲು ರೂಪಿಸಲಾದ ಜಾಗೃತಿ ಕಾರ್ಯಕ್ರಮವಾಗಿದೆ ಎಂದರು.

ಶಿವಾಜಿನಗರ ಕ್ಷೇತ್ರದ ಶಾಸಕರಾದ ರಿಜ್ವಾನ್ ಅರ್ಷದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಿಧಾನಪರಿಷತ್ ಸದಸ್ಯರಾದ ಗೋವಿಂದರಾಜು, ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾದ ಎಂ.ಎ.ಸಲೀಂ, ಅಪರ ಮುಖ್ಯ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯ, ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಸೀಮಾಂತ್ ಕುಮಾರ್ ಸಿಂಗ್, ಎಡಿಜಿಪಿ ಆರ್. ಹಿತೇಂದ್ರ, ಆದರ್ಶ್‌ಗ್ರೂಪ್‌ನಮುಖ್ಯಕಾರ್ಯನಿರ್ವಾಹಕ ನಿರ್ದೇಶಕ ಬಿ.ಎಂ.ಜಯಶಂಕರ್ ಹಾಗೂ ಇತರೆ ಗಣ್ಯರು ಉಪಸ್ಥಿತರಿದ್ದರು.

# ಬೆಂಗಳೂರಿಗೆ ಆಗಮಿಸಿದ ಭಾರತದ ಗೌರವಾನ್ವಿತ ರಾಷ್ಟ್ರಪತಿ ದ್ರೌಪದಿ ಮುರ್ಮು : ಆತ್ಮೀಯ ಸ್ವಾಗತ



■ **ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಭಾರತದ ಗೌರವಾನ್ವಿತ ರಾಷ್ಟ್ರಪತಿಗಳಾದ ದ್ರೌಪದಿ ಮುರ್ಮು ಅವರು ಇಂದು ಭಾರತೀಯ ವಾಯುಸೇನೆಯ ವಿಶೇಷ ವಿಮಾನದ ಮೂಲಕ ಹೆಚ್.ಎ.ಎಲ್. ವಿಮಾನ ನಿಲ್ದಾಣಕ್ಕೆ ಆಗಮಿಸಿದರು.

ಗೌರವಾನ್ವಿತ ರಾಷ್ಟ್ರಪತಿಗಳನ್ನು ರಾಜ್ಯದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಹಾಗೂ ಸನ್ಮಾನ್ಯ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಆತ್ಮೀಯವಾಗಿ ಬರಮಾಡಿಕೊಂಡರು. ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಕರ್ನಾಟಕ ಪೊಲೀಸ್ ಮಹಾನಿರ್ದೇಶಕ ಡಾ. ಎಂ.ಎ. ಸಲೀಂ, ಏರ್ ವೈಸ್ ಮಾರ್ಷಲ್ ಡಿ.ಎಸ್. ಡಂಗಿ, ಮೇಜರ್ ಜನರಲ್ ಮೋಹಿತ್ ಮಹೇಂದ್ರೂ, ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಸೀಮಂತ್ ಕುಮಾರ್ ಸಿಂಗ್, ಬೆಂಗಳೂರು ನಗರ ಜಿಲ್ಲಾಧಿಕಾರಿ ಕಾಂತರಾಜು ಪಿ.ಎಸ್. ಸೇರಿದಂತೆ ಗಣ್ಯರು ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಂದು ಜಿಕೆವಿಕೆಯಲ್ಲಿ ಮುಂಗಾರು ಹಂಗಾಮಿನ ಸುಧಾರಿತ ಬೇಸಾಯ ಕ್ರಮಗಳ ತರಬೇತಿ ಕಾರ್ಯಕ್ರಮ

■ **ಗಣಿನಾಡವಾಣಿ ವಾರ್ತೆ, ಬೆಂಗಳೂರು**

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು, ಸಮೇತಿ (ದಕ್ಷಿಣ) ಹಾಗೂ ಕೋರಮಂಡಲ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಇವುಗಳ ಸಂಯುಕ್ತ ಆಶ್ರಯದಲ್ಲಿ ಕ್ಷೇತ್ರ ಸಿಬ್ಬಂದಿಗಳಿಗೆ ಹಮ್ಮಿಕೊಳ್ಳಲಾಗಿರುವ "ಮುಂಗಾರು ಹಂಗಾಮಿನಲ್ಲಿ ಪ್ರಮುಖ ಬೆಳೆಗಳ ಸುಧಾರಿತ ಬೇಸಾಯ ಕ್ರಮಗಳ ತರಬೇತಿ ಕಾರ್ಯಕ್ರಮ"ದ ಉದ್ಘಾಟನಾ ಸಮಾರಂಭವು ಜುಲೈ 1 ರಂದು ಬೆಳಗ್ಗೆ 10.00 ಗಂಟೆಗೆ ಕೃಷಿ ವಿಶ್ವವಿದ್ಯಾನಿಲಯ ಜಿಕೆವಿಕೆ ನಾರ್ತ್ ಬ್ಲಾಕ್ ಸಭಾಂಗಣದಲ್ಲಿ ಜರುಗಲಿದೆ. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ. ಎಸ್.ವಿ. ಸುರೇಶ ಅವರು ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ. ಕೋರಮಂಡಲ್ ಇಂಟರ್‌ನ್ಯಾಷನಲ್ ಲಿಮಿಟೆಡ್‌ನ ಮಾರಾಟ ಮತ್ತು ಮಾರುಕಟ್ಟೆ (ದಕ್ಷಿಣ–2 ವಿಭಾಗ) ವಿಭಾಗೀಯ ಮುಖ್ಯಸ್ಥರುಗಳಾದ ಮುರಳಿ ಕೃಷ್ಣ, ರಮೇಶ್ ಕುಮಾರ್ ಹೆಚ್.ವಿ. ಮತ್ತು ಎಸ್.ಬಿ. ಪಾಟೇಲ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕೃಷಿ ವಿಶ್ವವಿದ್ಯಾನಿಲಯದ ವಿಸ್ತರಣಾ ನಿರ್ದೇಶಕರಾದ ಡಾ. ವೈ.ಎನ್. ಶಿವಲಿಂಗಯ್ಯ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಎಸ್‌ಐಆರ್ ಪ್ರಕ್ರಿಯೆ ಕುರಿತು ಚುನಾವಣಾ ಆಯೋಗ ಸ್ಪಷ್ಟನೆ ನೀಡಲು ಆಗ್ರಹ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕುರಿತು ಸಾರ್ವಜನಿಕರಲ್ಲಿ ಮೂಡಿರುವ ಆತಂಕಗಳಿಗೆ ರಾಜ್ಯ ಚುನಾವಣಾ ಆಯೋಗ ತಕ್ಷಣ ಸ್ಪಷ್ಟನೆ ನೀಡಬೇಕು ಹಾಗೂ ನಾಗರಿಕ ಸಮಾಜ ಮುಂದಿಟ್ಟಿರುವ ಹಕ್ಕೊತ್ತಾಯಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಜಾತ್ಯತೀತ ಪಕ್ಷಗಳು–ಜನಪರ ಸಂಘಟನೆಗಳ ಒಕ್ಕೂಟ ಆಗ್ರಹಿಸಿತು.



ನಗರದಲ್ಲಿ ಮಂಗಳವಾರ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಒಕ್ಕೂಟದ ಮುಖಂಡರು, ಮೇ 30ರಂದು ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಮನವಿ ಸಲ್ಲಿಸಲಾಗಿತ್ತು. ಎಸ್‌ಐಆರ್ ಪ್ರಕ್ರಿಯೆಯನ್ನು ಪಾರದರ್ಶಕ ಹಾಗೂ ಪ್ರಜಾತಾಂತ್ರಿಕ ರೀತಿಯಲ್ಲಿ ಜಾರಿಗೊಳಿಸುವಂತೆ ನಾಲ್ಕು ಪ್ರಮುಖ ಹಕ್ಕೊತ್ತಾಯಗಳನ್ನು ಮುಂದಿಟ್ಟಿದ್ದರೂ ಇದುವರೆಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜೂನ್ 20ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಬೃಹತ್ ಪ್ರತಿರೋಧ ಸಮಾವೇಶಕ್ಕೂ ರಾಜ್ಯ ಮುಖ್ಯ ಚುನಾವಣಾಧಿಕಾರಿಯನ್ನು ಆಹ್ವಾನಿಸಿ, ನಾಗರಿಕ ಸಮಾಜದ ಪ್ರಶ್ನೆಗಳಿಗೆ ಉತ್ತರಿಸುವಂತೆ ಮನವಿ ಮಾಡಲಾಗಿತ್ತು. ರಾಜ್ಯದ ಸಾಹಿತಿಗಳು, ಚಿಂತಕರು, ಕಲಾವಿದರು ಹಾಗೂ ರಂಗಕರ್ಮಿಗಳು ಈ ಕುರಿತು ಬಹಿರಂಗ ಪತ್ರ ಬರೆದಿದ್ದರೂ ಚುನಾವಣಾ ಆಯೋಗ ಮೌನ ವಹಿಸಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಆರೋಪಿಸಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಾರ್ವಜನಿಕ ಸಂಸ್ಥೆಗಳು ಜನರ ಪ್ರಶ್ನೆಗಳಿಗೆ ಉತ್ತರಿಸುವ ಜವಾಬ್ದಾರಿ ಹೊಂದಿವೆ. ಆದರೆ ಚುನಾವಣಾ ಆಯೋಗ ಸಾರ್ವಜನಿಕ ಮನವಿಗಳಿಗೆ ಸ್ಪಂದಿಸದೆ ಮೌನ ವಹಿಸಿರುವುದು ನಾಗರಿಕರಲ್ಲಿ ಆತಂಕ ಹಾಗೂ ಅನುಮಾನಗಳಿಗೆ ಕಾರಣವಾಗಿದೆ ಎಂದು ಅವರು ಹೇಳಿದರು.

ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಬಾಯಿಗೆ ಕಪ್ಪು ಬಟ್ಟೆ ಕಟ್ಟಿಕೊಂಡು ಪ್ರತಿಭಟನೆ ನಡೆಸಿ ಎಸ್‌ಐಆರ್ ಪ್ರಕ್ರಿಯೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಗಿದೆ. ಮತದಾರರ ಪಟ್ಟಿಯಿಂದ ಹೆಸರುಗಳನ್ನು ಕೈಬಿಡುವ ಯಾವುದೇ ಕ್ರಮ ಸಂಪೂರ್ಣ ಪಾರದರ್ಶಕವಾಗಿ ನಡೆಯಬೇಕು.

ಸಾರ್ವಜನಿಕರಿಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಲು ಹಾಗೂ ಮೇಲ್ಮನವಿ ಸಲ್ಲಿಸಲು ಸಮರ್ಪಕ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ನಾಗರಿಕ ಸಮಾಜದ ಹಕ್ಕೊತ್ತಾಯಗಳನ್ನು ಚುನಾವಣಾ ಆಯೋಗ ಗಂಭೀರವಾಗಿ ಪರಿಗಣಿಸದಿದ್ದರೆ ರಾಜ್ಯಾದ್ಯಂತ ಬೃಹತ್ ಜನಾಂದೋಲನ ರೂಪುಗೊಳ್ಳುವ ಸಾಧ್ಯತೆ ಇದೆ ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಸಂಗನಕಲ್ಲು ವಿಜಯಕುಮಾರ್, ಅಮ್ಜದ್, ಸತ್ಯಬಾಬು, ಗಂಗಾಧರ್, ಕೃಷ್ಣಪ್ಪ, ವೆಂಕಟಲಕ್ಷ್ಮಿ, ಪರ್ವೀನ್ ಬಾನು, ವೀರೇಂದ್ರ ಕುಮಾರ್ ಸೇರಿದಂತೆ ವಿವಿಧ ಜಾತ್ಯತೀತ ಪಕ್ಷಗಳು ಹಾಗೂ ಜನಪರ ಸಂಘಟನೆಗಳ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

# ಮತದಾರರ ಪಟ್ಟಿ ಪರಿಷ್ಕರಣೆ ಯಶಸ್ವಿಗೊಳಿಸಲು ಕಾಂಗ್ರೆಸ್ ಕಾರ್ಯಕರ್ತರಿಗೆ ಕರೆ





■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ನಗರದ ನೆಹರು ಕಾಲೋನಿಯಲ್ಲಿರುವ ಮಾಜಿ ಸಚಿವ ಹಾಗೂ ಹಾಲಿ ಬಳ್ಳಾರಿ ಗ್ರಾಮಾಂತರ ಶಾಸಕ ಬಿ.ನಾಗೇಂದ್ರರವರ ಕಚೇರಿಯಲ್ಲಿ, ಅವರ ಸೂಚನೆಯಂತೆ ಅಂದು ಬೆಳಿಗ್ಗೆ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ (ಎಸ್‌ಐಆರ್) ಕುರಿತು ಕಾಂಗ್ರೆಸ್ ಪಕ್ಷದ ಬೂತ್ ಮಟ್ಟದ ಏಜೆಂಟ್‌ಗಳು (ಬಿಎಲ್‌ಎ), ಪದಾಧಿಕಾರಿಗಳು ಹಾಗೂ ಕಾರ್ಯಕರ್ತರಿಗೆ ವಿಶೇಷ ತರಬೇತಿ ಕಾರ್ಯಾಗಾರ ನಡೆಯಿತು.

ಶಾಸಕರ ಸಹೋದರ ಹಾಗೂ ಕಾಂಗ್ರೆಸ್ ಹಿರಿಯ ಮುಖಂಡ ಬಿ.ವೆಂಕಟೇಶ್ ಪ್ರಸಾದ್ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆ ಸದಸ್ಯರು, ಕೌಲ್ ಬಜಾರ್ ಹಾಗೂ ಬಳ್ಳಾರಿ ಗ್ರಾಮಾಂತರ ಭಾಗದ ಕಾಂಗ್ರೆಸ್ ಮುಖಂಡರು ಭಾಗವಹಿಸಿದ್ದರು.

ಇದೇ ವೇಳೆ ಕೌಲ್ ಬಜಾರ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಲ್ಲ ಬಕಾಶ್ ಅವರು ಮಾತನಾಡಿ, ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಬೂತ್ ಮಟ್ಟದ ಏಜೆಂಟ್‌ಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.

ಅರ್ಹ ಮತದಾರರ ಹೆಸರು ಸೇರ್ಪಡೆ ಹಾಗೂ ಅಗತ್ಯ ತಿದ್ದುಪಡಿಗಳನ್ನು ಸಮಯಕ್ಕೆ ಸರಿಯಾಗಿ ಮಾಡಿಸುವುದು ಮುಖ್ಯ ಎಂದು ಹೇಳಿದರು.

ನಂತರ ಅಫಾಕ್ ಹುಸೇನ್ ಮಾತನಾಡಿ, ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಪ್ರಕ್ರಿಯೆ, ಅರ್ಜಿ ಸಲ್ಲಿಕೆ, ದಾಖಲೆಗಳ ಪರಿಶೀಲನೆ ಹಾಗೂ ಬೂತ್ ಮಟ್ಟದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾಹಿತಿ ನೀಡಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷ ಸಂಗನಕಲ್ಲು ವಿಜಯ್ ಕುಮಾರ್ ಮಾತನಾಡಿ, ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯದಲ್ಲಿ ಪ್ರತಿಯೊಬ್ಬ ಕಾರ್ಯಕರ್ತರು ಸಕ್ರಿಯವಾಗಿ ಪಾಲ್ಗೊಳ್ಳಬೇಕು.

ಯಾವುದೇ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಹೊರಗುಳಿಯದಂತೆ ಹಾಗೂ ಅನರ್ಹ ಹೆಸರುಗಳನ್ನು ಗುರುತಿಸುವ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಿ.ವೆಂಕಟೇಶ್ ಪ್ರಸಾದ್ ಮಾತನಾಡಿ, ಮುಂದೆ ಬರುವ ಗ್ರಾಮ ಪಂಚಾಯತಿ ಜಿಲ್ಲಾ ಪಂಚಾಯತಿ ತಾಲೂಕು ಪಂಚಾಯತಿ ಹಾಗೂ ಮಹಾನಗರ ಪಾಲಿಕೆ ಮತ್ತು 2028ರ ವಿಧಾನಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಪಕ್ಷದ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಸಂಘಟಿತವಾಗಿ ಕೆಲಸ ಆರಂಭಿಸಬೇಕು. ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಯಾಗಿ ನಡೆಸುವ ಮೂಲಕ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬಿಎಲ್‌ಎಗಳು, ಕಾಂಗ್ರೆಸ್ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಪಟ್ಟಣದಲ್ಲಿ ವಿವಿಧ ಅಂಗಡಿಗಳ ಮೇಲೆ ಟಾಸ್ಕ್ ಫೋರ್ಸ್ ತಂಡ ದಾಳಿ : ಮಕ್ಕಳ ರಕ್ಷಣೆ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಪಟ್ಟಣದ ವಿವಿಧ ಉದ್ದಿಮೆ ಹಾಗೂ ಅಂಗಡಿಗಳ ಮೇಲೆ ಮಂಗಳವಾರ ದಾಳಿ ನಡೆಸಿದ ಬಾಲ ಕಾರ್ಮಿಕ ಹಾಗೂ ಟಾಸ್ಕ್ ಫೋರ್ಸ್ ಸಮಿತಿಯ ಅಧಿಕಾರಿಗಳ ತಂಡ ಬಾಲಕಾರ್ಮಿಕರನ್ನು ರಕ್ಷಿಸಿದರು.

ಪಟ್ಟಣ ತಹಾಶೀಲ್ದಾರ್ ಕಛೇರಿಯಲ್ಲಿ ಮಂಗಳವಾರ ತಾಲ್ಲೂಕು ಟಾಸ್ಕ್ ಫೋರ್ಸ್ ಸಮಿತಿ ಸಭೆ ನಡೆಸಿದ ಬಳಿಕ ದಾಳಿ ಕೈಗೊಳ್ಳಲಾಗಿದೆ.

ಕಾರ್ಮಿಕ ಇಲಾಖೆಯ ಜಿಲ್ಲಾ ಯೋಜನಾಧಿಕಾರಿ ಡಿ.ಮೌನೇಶ ಮಾತನಾಡಿ, ಬಾಲ ಕಾರ್ಮಿಕರನ್ನು ಅಂಗಡಿ ಮುಂಗಟ್ಟುಗಳಲ್ಲಿ ದುಡಿಯಲಿಕ್ಕೆ ಬಳಸಿಕೊಳ್ಳುವುದು ಕಾನೂನು ಬಾಹಿರ. ಆದ್ದರಿಂದ ಪಟ್ಟಣದ ಕೆಲ ಅಂಗಡಿಗಳಿಗೆ ಭೇಟಿ ನೀಡಿದಾಗ ಮಾತ್ರ ಅಲ್ಲಿರುವ ಬಾಲ ಕಾರ್ಮಿಕರ ಬಗ್ಗೆ ಅತಿ ಹೆಚ್ಚು ಗಮನ ಹರಿಸಲು ಸಾಧ್ಯ. ಈ ನಿಟ್ಟಿನಲ್ಲಿ ಟಾಸ್ಕ್ ಫೋರ್ಸ್ ಸಮಿತಿಯ ತಂಡದಿಂದ ದಾಳಿ ಅನಿವಾರ್ಯವಾಗಿದೆ. ಇದರಿಂದ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಸಾಧ್ಯ. ಇಲ್ಲಿನ ಅಂಗಡಿಗಳನ್ನು ಸಿಕ್ಕಂತಹ ಬಾಲ ಕಾರ್ಮಿಕ ಮಕ್ಕಳನ್ನು ಅವರ ಶಾಲೆಗಳಿಗೆ ಭೇಟಿ ನೀಡಿ, ಪರಿಶೀಲಿಸಿ, ಶಾಲೆಗೆ ತೆರಳುವಂತೆ ಖಡಕ್ ಸೂಚನೆ ನೀಡಲಾಗಿದೆ ಎಂದರು.

ನಂತರ ಪಟ್ಟಣದಲ್ಲಿ 20ಕ್ಕೂ ಹೆಚ್ಚು ಅಂಗಡಿಗಳಿಗೆ ಮತ್ತು ವಾರದ ಸಂತೆ ಮಾರುಕಟ್ಟೆಗೆ ಭೇಟಿ ನೀಡಿ, ಬಾಲ ಕಾರ್ಮಿಕ ಪದ್ಧತಿ ತಡೆಗಟ್ಟುವ ನಿಟ್ಟಿನಲ್ಲಿ ಕರಪತ್ರಗಳನ್ನು ನೀಡುವ ಮೂಲಕ ಸಾರ್ವಜನಿಕ ವಲಯದಲ್ಲಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಕಾರ್ಮಿಕ ನಿರೀಕ್ಷಕ ಶಿವಶಂಕರ ತಳವಾರ್, ಎಎಸ್‌ಐ ಮಹಾಂತೇಶ, ಪಿಸಿ ರಾಮಾಂಜಿನಿ, ಡಿಇಒ ವಿಘ್ನೇಶ, ಪ್ರಭಾರಿ ಕೃಷಿ ಅಧಿಕಾರಿ ಜ್ಯೋತಿ, ಅಗ್ರಿಕಲ್ಚರಲ್ ಅಧಿಕಾರಿ ನವ್ಯ ಪ್ರಸಾಂತ್, ಮಕ್ಕಳ ಸಹಾಯಕವಾಣಿ ಕೇಂದ್ರದ ಆಪ್ತ ಸಮಾಲೋಚಕಿ ಚಂದ್ರಕಲಾ, ರೀಚ್ ಸಂಸ್ಥೆ ಸಂಯೋಜಕ ಹೆಚ್.ಹನುಮಂತಪ್ಪ, ಸಿಆರ್‌ಪಿ ರೇಣುಕಾರಾಧ್ಯ, ನಿಲಯ ಪಾಲಕರಾದ ಕೆ.ವಿರುಪಾಕ್ಷಪ್ಪ, ಗಾದಿಲಿಂಗಪ್ಪ, ರೀಡ್ಸ್ ಸಂಸ್ಥೆಯ ಮಧನ್ ಸೇರಿದಂತೆ ಇತರರು ಇದ್ದರು.

# ಮಧ್ಯಾಹ್ನದ ಬಿಸಿ ಊಟಕ್ಕೆ ಪರಿತಪಿಸಿದ ವಿದ್ಯಾರ್ಥಿಗಳು : ಕುಡಿಯುವ ನೀರಿನ ನೆಪದಲ್ಲಿ ತಡವಾದ ಊಟ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಸರ್ಕಾರ ಮಕ್ಕಳ ಕಲಿಕೆಯ ಜೊತೆಗೆ ಮಧ್ಯಾಹ್ನದ ಊಟದ ವ್ಯವಸ್ಥೆ ಕಲ್ಪಿಸಿದೆ. ಆದರೆ, ಪಟ್ಟಣದ ಷಾಮಿಯಾಚಂದ್ ಸರ್ಕಾರಿ ಪ್ರೌಢಶಾಲೆಯಲ್ಲಿ ಮಧ್ಯಾಹ್ನ ಮೂರು ಗಂಟೆಯಾದರೂ, ಮಧ್ಯಾಹ್ನದ ಬಿಸಿ ಊಟ ಇಲ್ಲದೇ, ಮಕ್ಕಳು ಹಸಿವಿನಿಂದ ಪರಿತಪಿಸುವಂತಾಗಿತ್ತು.

ಹೌದು. ಇಲ್ಲಿನ ಶಾಲೆಯಲ್ಲಿ ಮಕ್ಕಳು ಮಧ್ಯಾಹ್ನದ ಮೂರು ಗಂಟೆವರೆಗೂ ಊಟಕ್ಕಾಗಿ ಕಾದು ಉಳಿದಿದ್ದರು. ಇನ್ನೇನು ಊಟ ಬಂತು ಅನ್ನುಷ್ಟರಲ್ಲಿ ಮಕ್ಕಳ ಹಸಿವು ಮೀರಿತ್ತು. ಇಲ್ಲಿನ ಶಾಲೆಯ ಉಪ ಪ್ರಾಚಾರ್ಯರ ಬೇಜವಾಬ್ದಾರಿಯಿಂದ ಮಕ್ಕಳಿಗೆ ಸರಿಯಾದ ಸಮಯಕ್ಕೆ ಬಿಸಿ ಊಟ ಇಲ್ಲದೇ ಗೋಳಾಡುವಂತ ಸ್ಥಿತಿ ನಿರ್ಮಾಣವಾಗಿತ್ತು. ಇಲ್ಲಿನ ಶಾಲೆಯಲ್ಲಿ ಕುಡಿಯಲಿಕ್ಕೆ ನೀರಿಲ್ಲ ಎಂಬ ನೆಪದಲ್ಲಿ ಮಕ್ಕಳಿಗೆ ಊಟದ ಸಮಸ್ಯೆ ತಲೆ ದೋರಿತ್ತು. ಶಾಲೆಯಲ್ಲಿರುವ ನಲ್ಲಿಗೆ ಪ್ರತಿ ದಿನ ನೀರು ಬರುತ್ತಿತ್ತು. ಆದರೆ, ಮಂಗಳವಾರದಂದು ನೀರು ಬಂದಿಲ್ಲ. ಇದರ ನೆಪದಲ್ಲೇ ಮಕ್ಕಳಿಗೆ ಬಿಸಿ ಊಟ ನೀಡದೇ, ತಡ ಮಾಡಲಾಗಿದೆ. ಪಕ್ಕದಲ್ಲೇ ಶುದ್ಧ ಕುಡಿಯುವ ನೀರಿನ ಘಟಕ ಇದ್ದರೂ ಸಹ ನೀರು ತರಿಸಲಿಕ್ಕೆ ಆಗದೇ, ಕೆಲ ಸಮಯ ಕಳೆದಿದ್ದಾರೆ. ಇದರಿಂದ ಮಕ್ಕಳು ಮಧ್ಯಾಹ್ನದ 3 ಗಂಟೆ ತನದ ಕಾದು ಕಾದು ಸುಸ್ತಾಗಿದ್ದರು. ನಂತರ ಬಾಲ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿದ ವೇಳೆ ಆಗಮಿಸಿದ ಪತ್ರಕರ್ತರು ಉಪ ಪ್ರಾಚಾರ್ಯರನ್ನು ಕೇಳಿದಾಗ ನೀರಿಲ್ಲ ಸಮಸ್ಯೆಯಿಂದ ಊಟ ನೀಡುವುದು ತಡವಾಗಿರುವುದು ತಿಳಿದಿದೆ. ಮಕ್ಕಳು ಇಷ್ಟೊತ್ತು ತಡೆದಿರುವುದು ಹೆಚ್ಚಿಂದು, ಆದ್ದರಿಂದ ಕೂಡಲೇ ಪಕ್ಕದಲ್ಲಿರುವ ಶುದ್ಧ ಘಟಕದಿಂದ ನೀರು ಹರಿಸಿ, ಊಟ ನೀಡುವಂತೆ ತಿಳಿಸಿದಾಗ ಎಚ್ಚೆತ್ತ ಅಲ್ಲಿದ್ದ ಉಪ ಪ್ರಾಚಾರ್ಯರು ಕೂಡಲೇ ಶುದ್ಧ ಕುಡಿಯುವ ನೀರಿನ ಕ್ಯಾನ್‌ಗಳನ್ನು ತರಿಸಿ, ನಂತರ ಊಟವನ್ನು ಮಕ್ಕಳಿಗೆ ನೀಡಿರುವುದು ಕಂಡು ಬಂತು. ಇಂತಹ ಸಮಸ್ಯೆಗಳು ಮೇಲಾಧಿಕಾರಿಗಳ ಹಾಗೂ ಸ್ಥಳೀಯ ಸಿಆರ್‌ಪಿಗಳ ಗಮನಕ್ಕೆ ಬರುವದಿಲ್ಲವೇ ಎಂಬ ಪ್ರಶ್ನೆಯಾಗಿದೆ. ಆದ್ದರಿಂದ ಮೇಲಾಧಿಕಾರಿಗಳು ಗಮನ ಹರಿಸಿ, ಸೂಕ್ತಕ್ರಮಕ್ಕೆ ಮುಂದಾದರೆ ಮಾತ್ರ ಇಂತಹ ಸಮಸ್ಯೆಗಳು ಆಗದಂತೆ ಎಚ್ಚರವಹಿಸಲು ಸಾಧ್ಯ ಎಂಬುದಾಗಿದೆ.

ನಂತರ ಉಪ ಪ್ರಾಚಾರ್ಯೆ ಸುಜಾತ ಮಾತನಾಡಿ, ಇಲ್ಲಿನ ಪ್ರೌಢಶಾಲೆಯ ಕೊಠಡಿಗಳ ದುರಸ್ಥಿ ಕಾರ್ಯ ನಡೆಯುತ್ತಿರುವುದರಿಂದ ನಳ(ನಲ್ಲಿ) ದುರಸ್ಥಿಯಲ್ಲಿದ್ದು, ನೀರಿನ ಸಮಸ್ಯೆ ಉಂಟಾಗಿದೆ. ಇನ್ನೇನು ನೀರು ಬರಬಹುದು ಎಂದುಕೊಂಡಿದ್ದೇವು. ಆದರೆ, ಬಾರದ ಹಿನ್ನಲೆ ಶುದ್ಧ ಕುಡಿಯುವ ನೀರಿನ ಕ್ಯಾನ್‌ಗಳನ್ನು ತರಿಸಿ, ಮಕ್ಕಳಿಗೆ ಊಟ ನೀಡಲಾಗಿದೆ ಎಂದರು.

# ಎಸ್‌ಐಆರ್ ಪ್ರಕ್ರಿಯೆಗೆ ಜಿಲ್ಲಾಧಿಕಾರಿಗಳಿಂದ ಅಧಿಕೃತ ಚಾಲನೆ

■ ಗಣಿನಾಡವಾಣಿ ವಾರ್ತೆ, ವಿಜಯನಗರ

ತಾಲ್ಲೂಕಿನ ಕಮಲಾಪುರ ಪಟ್ಟಣದಲ್ಲಿ ಮಂಗಳವಾರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅವರು ಪಟ್ಟಣದ ಸ್ವಾತಂತ್ರ್ಯ ಹೋರಾಟಗಾರರಾದ ದೇಸಾಯಿ ಗುಂಡೂರಾವ್ ಅವರ ಕುಟುಂಬದ ಮತದಾರರಿಗೆ ಮತ್ತು ಹಳೆ ಮಲಪನಗುಡಿಯ ಪ್ರಸಿದ್ಧ ಡೊಳ್ಳು ಕುಣಿತ ಕಲಾವಿದರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕಾರ್ ಮಂಚಪ್ಪ ಅವರ ಕುಟುಂಬದ ಮತದಾರರಿಗೂ ಪ್ರಥಮ ಹಂತದಲ್ಲಿ ಗಣತಿ ನಮೂನೆ (ಎನ್ಯಾಮುರೇಷನ್ ಫಾರ್ಮ್) ನೀಡುವ ಮೂಲಕ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಗೆ ಅಧಿಕೃತವಾಗಿ ಚಾಲನೆ ನೀಡಿದರು.



ಇಂದಿನಿಂದ ಜುಲೈ 29 ರವರಿಗೆ ಗಣತಿ ಕಾರ್ಯ ನಡೆಯಲಿದೆ. ಈ ಪ್ರಕ್ರಿಯೆಯಲ್ಲಿ 1234 ಬಿಎಲ್‌ಓ (ಬೂತ್ ಮಟ್ಟದ ಅಧಿಕಾರಿಗಳು) ಗಳು ಕಾರ್ಯ ನಿರ್ವಹಿಸಲಿದ್ದು, ಅವರು ಜಿಲ್ಲೆಯ ಪ್ರತಿಯೊಬ್ಬರ ಮನೆ ಮನೆಗೆ ಖುದ್ದಾಗಿ ಭೇಟಿ ನೀಡಿ, ಮತದಾರರ ವಿವರಗಳನ್ನು ಪರಿಶೀಲಿಸುವರು. ಅಧಿಕಾರಿಗಳು ಮನೆ ಮನೆ ಭೇಟಿ ನೀಡಿದಾಗ ನಿಗದಿತ ನಮೂನೆಯಲ್ಲಿ ಕುಟುಂಬದ ಹಾಲಿ ಮತದಾರರ ಸರಿಯಾದ ವಿವರಗಳನ್ನು ಭರ್ತಿ ಮಾಡಬೇಕು. ಒಂದಕ್ಕಿಂತ ಹೆಚ್ಚು ಕಡೆ ಹೆಸರಿರುವುದು, ಮರಣ ಹೊಂದಿದವರ ಅಥವಾ ಶಾಶ್ವತವಾಗಿ ವಲಸೆ ಹೋದವರ ಹೆಸರುಗಳು ಪಟ್ಟಿಯಲ್ಲೇ ಮುಂದುವರಿದಿರುವುದನ್ನು ಗುರುತಿಸಿ ತೆಗೆದು ಹಾಕಲು ಸಹಕಾರಿಯಾಗಿದೆ.

ಒಂದೇ ಕುಟುಂಬದ ಎಲ್ಲಾ ಮತದಾರರ ಹೆಸರುಗಳು ಒಂದೇ ಕಡೆ ಮತ್ತು ಸರಿಯಾದ ಕ್ರಮದಲ್ಲಿ ಇರುವಂತೆ ಜೋಡಿಸಲು ಅವಕಾಶ ಕಲ್ಪಿಸಿದೆ. ಆಧಾರ್ ಕಾರ್ಡ್ ಅಥವಾ ಇತರ ಅಧಿಕೃತ ದಾಖಲೆಗಳೊಂದಿಗೆ ಮತದಾರರ ಗುರುತಿನ ಚೀಟಿಯ ಮಾಹಿತಿ ಹೊಂದಾಣಿಕೆಯಾಗದಿದ್ದರೇ, ತಿದ್ದುಪಡಿ ಮಾಡಲು ಹಾಗೂ ಅರ್ಹ ಹೊಸ ಮತದಾರರನ್ನು ಸೇರ್ಪಡೆಗೊಳಿಸಲು ಇದು ಉತ್ತಮ ಅವಕಾಶ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಪಿ.ವಿವೇಕಾನಂದ, ತಹಶೀಲ್ದಾರ್ ಶೃತಿ. ಎಂ, ಬೂತ್ ಮಟ್ಟದ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ನಿವೃತ್ತಿ ಹೊಂದಿದ ಲೋಕೇಶ್ ಅವರಿಗೆ ಸನ್ಮಾನ



■ ಗಣಿನಾಡವಾಣಿ ವಾರ್ತೆ, ಸಿರುಗುಪ್ಪ

ಸಿರುಗುಪ್ಪ ನಗರದ ಪ್ರಾಥಮಿಕ ಸಹಾಕರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಲ್ಲಿ ಕೆಲಸ ನಿರ್ವಹಿಸಿ ಮಂಗಳವಾರ ವಯೋ ನಿವೃತ್ತಿ ಹೊಂದಿದ ಲೋಕೇಶ್ ಅವರನ್ನು ಬ್ಯಾಂಕ್ ಅಧ್ಯಕ್ಷ ಚೊಕ್ಕ ಬಸವನ ಗೌಡ ಹಾಗೂ ಸಿಬ್ಬಂದಿ ವರ್ಗದವರು ಸನ್ಮಾನಿಸಿ ಗೌರವಿಸಿದರು. ಬ್ಯಾಂಕ್ ವ್ಯವಸ್ಥಾಪಕ ತಿಪ್ಪಣ್ಣ ಎಸ್.ಬನಸೋಡಿ, ಆಡಳಿತ ಮಂಡಳಿ ನಿರ್ದೇಶಕರು, ಬ್ಯಾಂಕ್ ಸಿಬ್ಬಂದಿ, ಕುಟುಂಬದ ಸದಸ್ಯರು ಇದ್ದರು.

# ಮಡಿವಾಳ ಕರಾಮುವಿ ಪ್ರಾದೇಶಿಕ ಕೇಂದ್ರ ನಿರ್ದೇಶಕ ಹುದ್ದೆಗೆ ಡಾ. ಪಿ. ಹರೀಶ್ ನೇಮಕ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು



ಡಾ. ಪಿ. ಹರೀಶ್ ಪ್ರಾದೇಶಿಕ ನಿರ್ದೇಶಕರು, ಗ್ರೇಡೆಡ್ ಪೇ (ಕಾಲಿಕ ವೇತನ ಶ್ರೇಣಿ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಚಿಕ್ಕಮಗಳೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮಡಿವಾಳದ ಕರಾಮುವಿ ಪ್ರಾದೇಶಿಕ ಕೇಂದ್ರದ ನಿರ್ದೇಶಕರ ಹುದ್ದೆಗೆ ನಿಯುಕ್ತಿಗೊಳಿಸಿ ಕುಲಸಚಿವರು ಆದೇಶ ಹೊರಡಿಸಿದ್ದಾರೆ.

GANINAADA VAANI KANNADA DAILY MORNING OWNER , PUBLISHER, PRINTED BY Editor name : A.K.MALLIKARJUNA: HOUSE NO 84, WARD NO 22, MAHANANDI KOTTAM STREET, TALURU ROAD, AMBEDKARNAGAR, GANDHI NAGAR, BELLARY, KARNATAKA - 583101. Printed at PENNAOBALESHWARA ENTERPRISES#237, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583113.